ಧಾರವಾಡ * ಕಾರವಾರ * ಹಾವೇರಿ * ಕೊಪ್ಪಳ * ಬಳ್ಳಾರಿ * ಬಾಗಲಕೋಟ * ವಿಜಯನಗರ * ಗದಗದಿಂದ ಏಕ ಕಾಲಕ್ಕೆ ಒಂದೇ ಸಂಚಿಕೆ ಪ್ರಕಟಗೊಳ್ಳುವ ದಿನ ಪತ್ರಿಕೆ



# ಸ್ನೇಹ ಜೀವಿ

ಉತ್ತರ ಕರ್ನಾಟಕದ ಧ್ವನಿ...!

SNEHAJEEVI KANNADA DAILY

ಕನ್ನಡ ದಿನಪತ್ರಿಕೆ




ಡಾ. ಎ.ಎನ್. ಶಾಲಗಾರ ಸಾರಥ್ಯದಲ್ಲಿ | MAG: PRBCR-10/2016-17 | Mob: 94827 70999 | e-mail: snehajeevidaily@gmail.com | Editor: Dr. A.N. Shalagar

RNI NO. KARKAN/2013/49379 | Volume / ಸಂಪುಟ : 14 | Issue / ಸಂಚಿಕೆ : 207 | Date : 26-08-2025 ಮಂಗಳವಾರ | Page / ಪುಟ : 4 | ಗದಗ-GADAG | Rs. 2/-

ಪುಟ -4 ಗಣೇಶ ಹಬ್ಬ 2025: ಮನೆ,ಪೆಂಡಾಲ್‌ಗಳಿಗೆ ಮಾಡಬಹುದಾದ ಸರಳ ಅಲಂಕಾರ!

ಪುಟ -3 ಪತಿ-ಪತ್ನಿ ಅರಿತು ನಡೆದರೆ ಬಾಳು ಬಂಗಾರ: ಕಲ್ಲಯ್ಯಜ್ಜನವರು

ಪುಟ -2 ಅತ್ಯುನ್ನತ ಸಾಧನೆಗೆ ಶಿಕ್ಷಣವೊಂದೇ ಸಾಧನ : ಸಲೀಂ ಅಹ್ಮದ್

ಪುಟ -4 300 ಲೀ. ಎದೆಹಾಲು ದಾನ ಮಾಡಿ ಸಾವಿರಾರು ಶಿಶುಗಳಿಗೆ ಜೀವ ಕೊಟ್ಟ ಮಹಾ ತಾಯಿ

# ಕರ್ನಾಟಕದಲ್ಲಿ ಪ್ರತಿ ವರ್ಷ 2,000ಕ್ಕೂ ಹೆಚ್ಚು ಮಕ್ಕಳು ನಾಪತ್ತೆ! ರಾಜ್ಯಪಾಲರ ಕಳವಳ

**ಕಾಣೆಯಾದ ಅಂತಹ ಮಕ್ಕಳಲ್ಲಿ ಸುಮಾರು ಶೇ. 10 ರಷ್ಟು ಮಕ್ಕಳು ಎಂದಿಗೂ ಪತ್ತೆಯಾಗುವುದಿಲ್ಲ. ಅಂದರೆ, ಪ್ರತಿ ವರ್ಷ 200ಕ್ಕೂ ಹೆಚ್ಚು ಕುಟುಂಬಗಳು ತಮ್ಮ ಮಕ್ಕಳನ್ನು ಶಾಶ್ವತವಾಗಿ ಕಳೆದುಕೊಳ್ಳುತ್ತಿವೆ ಎಂದು ಹೇಳಿದರು.**

❑ ಸ್ನೇಹಜೀವಿ ನ್ಯೂಸ್

ಬೆಂಗಳೂರು: ಸರ್ಕಾರಿ ಅಂಕಿ ಅಂಶಗಳ ಪ್ರಕಾರ, ಕರ್ನಾಟಕದಲ್ಲಿ ಪ್ರತಿ ವರ್ಷ 2,000ಕ್ಕೂ ಹೆಚ್ಚು ಮಕ್ಕಳು ಕಾಣೆಯಾಗುತ್ತಿರುವ ಬಗ್ಗೆ ವರದಿಯಾಗಿರುವುದಾಗಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೋಮವಾರ ಕಳವಳ ವ್ಯಕ್ತಪಡಿಸಿದ್ದಾರೆ.

ರಾಜಭವನದಲ್ಲಿ ಭಾರತೀಯ ನರ್ಸ್‌ಗಳು ಮತ್ತು ಅಲೈಡ್ ಸಂಘ ಆಯೋಜಿಸಿದ್ದ 'ಮಾನವ ಕಳ್ಳಸಾಗಣೆ ವಿರೋಧಿ- ಪೋಷಕ-ರಿಗೆ ಅರಿವು ಮೂಡಿಸುವ 'ಗೃಹ ಶುದ್ಧಿ ಅಭಿಯಾನ'ಕ್ಕೆ ಚಾಲನೆ ನೀಡಿ ಮಾತನಾಡಿದ ರಾಜ್ಯಪಾಲರು, ಕಾಣೆಯಾದ ಅಂತಹ ಮಕ್ಕಳಲ್ಲಿ ಸುಮಾರು ಶೇ. 10 ರಷ್ಟು 4ನೇ ಪುಟಕ್ಕೆ




# ಮುಖ್ಯಮಂತ್ರಿ ರೇಖಾ ಗುಪ್ತಾಗೆ ನೀಡಿದ್ದ Z ಶ್ರೇಣಿಯ CRPF ಭದ್ರತೆ ವಾಪಸ್ ಪಡೆದ ಕೇಂದ್ರ !



❑ ಸ್ನೇಹಜೀವಿ ನ್ಯೂಸ್

ನವದೆಹಲಿ: ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮೇಲೆ ನಡೆದ ದಾಳಿಯ ನಂತರ ಅವರಿಗೆ ನೀಡಲಾಗಿದ್ದ Z ವರ್ಗದ ಅಖಿಕಈ ಭದ್ರತೆಯನ್ನು ಕೇಂದ್ರ ಸರ್ಕಾರ ಹಿಂತೆಗೆದುಕೊಂಡಿದೆ ಎಂದು ಅಧಿಕೃತ ಮೂಲಗಳು ಸೋಮವಾರ ತಿಳಿಸಿವೆ.

ರೇಖಾ ಗುಪ್ತ ಅವರಿಗೆ ನೀಡಿದ್ದ 'ಝಡ್' ಶ್ರೇಣಿಯ ಸಿಆರ್‌ಪಿಎಫ್ ವಿಐಪಿ ಭದ್ರತೆಯನ್ನು ಕೇಂದ್ರ ಸರ್ಕಾರ ವಾಪಸ್ ಪಡೆದುಕೊಂಡಿದ್ದು, ದೆಹಲಿ ಪೊಲೀಸರೇ ಸಿಎಂ ಅವರಿಗೆ ಭದ್ರತೆ ಒದಗಿಸುತ್ತಾರೆ ಎಂದು ಮೂಲಗಳು ತಿಳಿಸಿವೆ.

**ರೇಖಾ ಗುಪ್ತ ಅವರಿಗೆ ನೀಡಿದ್ದ 'ಝಡ್' ಶ್ರೇಣಿಯ ಸಿಆರ್‌ಪಿಎಫ್ ವಿಐಪಿ ಭದ್ರತೆಯನ್ನು ಕೇಂದ್ರ ಸರ್ಕಾರ ವಾಪಸ್ ಪಡೆದುಕೊಂಡಿದ್ದು, ದೆಹಲಿ ಪೊಲೀಸರೇ ಸಿಎಂ ಅವರಿಗೆ ಭದ್ರತೆ ಒದಗಿಸುತ್ತಾರೆ.**

ರೇಖಾ ಗುಪ್ತಾ ಅವರ ಮೇಲೆ ಆಗಸ್ಟ್ 20 ರಂದು ಬೆಳಿಗ್ಗೆ ಸಿವಿಲ್ ಲೈನ್ಸ್ ಪ್ರದೇಶದಲ್ಲಿರುವ ಅವರ ಕ್ಯಾಂಪ್ ಕಚೇರಿಯಲ್ಲಿ 'ಜನ ಸಂವಾದ' ಕಾರ್ಯಕ್ರಮದ ಸಂದರ್ಭದಲ್ಲಿ ವ್ಯಕ್ತಿಯೊಬ್ಬ ಹಲ್ಲೆ ನಡೆಸಿದ್ದ, ಈ ಹಲ್ಲೆಯನ್ನು "ರೇಖಾ ಅವರನ್ನು ಕೊಲ್ಲಲು ಯೋಜಿತ ಪಿತೂರಿ"ಯ ಭಾಗ ಎಂದು ಅವರ ಕಚೇರಿ ಹೇಳಿದೆ. ಕೊಲೆ ಯತ್ನ ಆರೋಪಕ್ಕೆ ಸಂಬಂಧಿಸಿದಂತೆ ಗುಜರಾತ್‌ನ ರಾಜ್‌ಕೋಟ್ ನಿವಾಸಿ ಸಕ-ರಿಯಾ ರಾಜೇಶ್‌ಭಾಯಿ ಖಿಮ್ಜಿಭಾಯಿ (41) ಎಂಬುವವನನ್ನು ಬಂಧಿಸಿ, ಸಿಆರ್‌ಪಿ-ಎಫ್‌ದಾಖಲಿಸಿದ್ದರು.

ಗುಪ್ತಾ ಹಾಗೂ ಅವರ ಅಧಿಕೃತ ನಿವಾಸದಲ್ಲಿ ಅರೆಸೈನಿಕ ಪಡೆಯ ವಿಐಪಿ ಸೆಕ್ಯೂರಿಟಿ ಗ್ರೂಪ್ (ವಿಎಸ್‌ಜಿ) ಅನ್ನು ಭದ್ರತೆಗೆ ನಿಯೋಜಿಸಲಾಗಿತ್ತು. ಕೇಂದ್ರ ಗೃಹ ಸಚಿವಾಲಯದ ಸೂಚನೆಗೆಯ ಮೇರೆಗೆ ದೆಹಲಿ ಸಿಎಂ ಅವರ ಭದ್ರತೆಯನ್ನು ಕೇಂದ್ರ ಮೀಸಲು ಪಡೆ (ಸಿಆರ್‌ಪಿಎಫ್) ವಹಿಸಿಕೊಂಡಿತ್ತು.

# ಮಸೂದೆ ತೀರ್ಮಾನ ಕೈಗೆ ತಪ್ಪಾಗಿ ಕಾಣುತ್ತದೆ ಅಮಿತ್ ಶಾ ವ್ಯಂಗ್ಯ



❑ ಸ್ನೇಹಜೀವಿ ನ್ಯೂಸ್

ನವದೆಹಲಿ,ಆ.25- ದೇಶದಲ್ಲಿ ಸತತ ಮೂರು ಲೋಕಸಭೆ ಚುನಾವಣೆಗಳಲ್ಲಿ ಸೋತ ನಂತರ ಕಾಂಗ್ರೆಸ್ ಹತಾಶೆಯಿಂದ ಕುದಿಯುತ್ತಿದ್ದು ಕೇಂದ್ರ ಸರ್ಕಾರ ತರುವ ಎಲ್ಲಾ ಮಸೂದೆಗಳು ಮತ್ತು ನಿರ್ಧಾರಗಳು ತಪ್ಪಾಗಿ ಕಾಣುತ್ತಿವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದಿಲ್ಲಿ ವಾಗ್ದಾಳಿ ನಡೆಸಿದ್ದಾರೆ.

ಡಾ."ಮನಮೋಹನ್ ಸಿಂಗ್ ಅವರು ತರಲು ಉದ್ದೇಶಿಸಿದ್ದ ಸುಗ್ರೀವಾಜ್ಞೆ ಹರಿದು ಹಾಕಿದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ 30 ದಿನಗಳಿಗೂ ಹೆಚ್ಚು ಕಾಲ ಜೈಲಿನಲ್ಲಿರುವ ಪ್ರಧಾನಿ, ಮುಖ್ಯಮಂತ್ರಿಗಳು ಮತ್ತು ಕ್ಯಾಬಿನೆಟ್ ಸಚಿವರನ್ನು ಪದಚ್ಯುತಗೊಳಿಸುವ ಮಸೂದೆ ವಿರೋಧಿಸುವ ಯಾವ ನೈತಿಕತೆ ಇದೆಯೇ ಎಂದು ಪ್ರಶ್ನಿಸಿದ್ದಾರೆ.

ಸುದ್ದಿಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು 2013ರಲ್ಲಿ ಆಗಿನ ಪ್ರಧಾನಿ ಮನಮೋಹನ್ ಸಿಂಗ್ ಅವರು ಆ[illegible]ಜೆಡಿಯ ಲಾಲು ಪ್ರಸಾದ್ ಯಾದವ್ ರಕ್ಷಿಸಲು ತಂದಿದ್ದ ಸುಗ್ರೀವಾಜ್ಞೆಯನ್ನು ರಾಹುಲ್ ಗಾಂಧಿ 'ಹರಿದು' ಹಾಕಿದ್ದರು ಎನ್ನುವ ಮೂಲಕ ತಿರುಗೇಟು ನೀಡಿದ್ದಾರೆ.


"ಲಾಲು ಪ್ರಸಾದ್ ಅವರನ್ನು ರಕ್ಷಿಸಲು ಮನಮೋಹನ್ ಸಿಂಗ್ ತಂದ ಸುಗ್ರೀವಾಜ್ಞೆಯನ್ನು ರಾಹುಲ್ ಗಾಂಧಿ ಯಾಕೆ ಹರಿದು ಹಾಕಿದರು, ಆ ದಿನ ನೈತಿಕತೆ ಇದ್ದರೆ, ಈಗ ಏನಾಯಿತು ಎಂದು ಪ್ರಶ್ನಿಸಿದ ಅವರು ಸತತ ಮೂರು ಚುನಾವಣೆಗಳಲ್ಲಿ ಸೋತಿದ್ದೀರಿ ಎಂಬ ಕಾರಣಕ್ಕಾಗಿಯೇ ಎಂದಿದ್ದಾರೆ.

ನೈತಿಕತೆಯ ಮಾನದಂಡಗಳು ಚುನಾವಣೆಗಳಲ್ಲಿ ಗೆಲುವು ಅಥವಾ ಸೋಲಿನೊಂದಿಗೆ ಸಂಬಂಧ ಹೊಂದಿಲ್ಲ. ಅವು ಸೂರ್ಯ ಮತ್ತು ಚಂದ್ರನಂತೆ ಸ್ಥಿರವಾಗಿರಬೇಕು ಎಂದು ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಮೇವು ಹಗರಣದಲ್ಲಿ ಲಾಲು ಪ್ರಸಾದ್ ಯಾದವ್ ಅವರಿಗೆ ಶಿಕ್ಷೆ ವಿಧಿಸಿದ ನಂತರ, ಶಿಕ್ಷೆಗೊಳಗಾದ ಶಾಸಕರಿಗೆ ತಮ್ಮ ಸ್ಥಾನ ಉಳಿಸಿಕೊಳ್ಳಲು ಸುಗ್ರೀವಾಜ್ಞೆಯು ಮೂರು ತಿಂಗಳ ಕಾಲಾವಕಾಶ ನೀಡಿತ್ತು ಶಿಕ್ಷೆಗೊಳಗಾದ ಸಂಸದರು ಮತ್ತು ಶಾಸಕರ ಅನರ್ಹತೆಯ ಕುರಿತು ಸುಪ್ರೀಂ ಕೋರ್ಟ್ ಆದೇಶ ರದ್ದುಗೊಳಿಸಿತು ಮತ್ತು ನಂತರ ಅದನ್ನು ಹಿಂಪಡೆಯಲಾಯಿತು ಎಂದರು. ಯಾವುದೇ ಪ್ರಧಾನಿ, ಮುಖ್ಯಮಂತ್ರಿ ಅಥ-'ವಾ ಸಚಿವರನ್ನು ಸತತ 30 ದಿನಗಳ ಕಾಲ ಬಂಧನದಲ್ಲಿಡಲು ಉದ್ದೇಶಿಸಿರುವ 2025 ರ ಸಂವಿಧಾನ (130ನೇ ತಿದ್ದುಪಡಿ) ಮಸೂದೆಯ ಅಡಿ ಈ ಸಾಂವಿಧಾನಿಕ ಹುದ್ದೆಗಳಲ್ಲಿರುವ ಯಾರಾದರೂ ಜೈಲಿನಿಂದ ಸರ್ಕಾರ ನಡೆಸುವುದು "ನ್ಯಾಯಯುತ"ವೇ ಎಂದು ಪ್ರಶ್ನಿಸಿದ್ದಾರೆ.

"ಈ ದೇಶದಲ್ಲಿ ಎನ್‌ಡಿಎ ಮುಖ್ಯಮಂತ್ರಿಗಳ ಸಂಖ್ಯೆ ಹೆಚ್ಚಾಗಿದೆ. ಪ್ರಧಾನಿ ಕೂಡ ಎನ್‌ಡಿಎಯವರೇ. ಆದ್ದರಿಂದ ಈ ಮಸೂದೆಯು ವಿರೋಧ ಪಕ್ಷಗಳಿಗೆ ಮಾತ್ರ ಪ್ರಶ್ನೆಗಳನ್ನು ಎತ್ತುವುದಿಲ್ಲ.

# ಪ್ರತಾಪಸಿಂಹನ ಆಕ್ಷೇಪಣೆ ಮುಖ್ಯವಲ್ಲ, ಸಂವಿಧಾನವೇ ನಮಗೆ ಪರಮೋಚ್ಚ: ಡಾ ಹೆಚ್ ಸಿ ಮಹದೇವಪ್ಪ



❑ ಸ್ನೇಹಜೀವಿ ನ್ಯೂಸ್

ಬೆಂಗಳೂರು, ಆಗಸ್ಟ್ 25: ಈ ಬಾರಿಯ ದಸರಾ ಮಹೋತ್ಸವವನ್ನು ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಅವರಿಂದ ಉದ್ಘಾಟಿಸುತ್ತಿರುವುದಕ್ಕೆ ಮಾಜಿ ಸಂಸದ ಪ್ರತಾಪ್ ಸಿಂಹ ಮತ್ತು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆಕ್ಷೇಪಣೆ ವ್ಯಕ್ತಪಡಿಸಿರುವುದಕ್ಕೆ ಪ್ರತಿಕ್ರಿಯೆ ನೀಡಿದ ಸಮಾಜ ಕಲ್ಯಾಣ ಖಾತೆ ಸಚಿವ ಡಾ ಹೆಚ್ ಸಿ ಮಹದೇವಪ್ಪ, ಅವರು ಆಕ್ಷೇಪಣೆ ಎತ್ತಿದರೆ ಏನಂತೆ, ನಮಗೆ ಅವ-ರಿವರು ಹೇಳಿದ್ದು ಮುಖ್ಯವಲ್ಲ, ಸಂವಿಧಾನ ಹೇಳೋದು ಮಾತ್ರ ಪರಮೋಚ್ಚ, ದಸರಾ ನಾಡಿನ ಸಾಂಸ್ಕೃತಿಕ ಜೀವನವನ್ನು ಅಭಿವ್ಯಕ್ತಿಗೊಳಿಸುವ ನಾಡಹಬ್ಬ, ದಸರೆಯನ್ನು ಎಲ್ಲ 140 ಕೋಟಿ ಭಾರತೀಯರು ಆಚರಿಸುತ್ತಾರೆ ಎಂದು ಹೇಳಿದರು. ರಾಜಕೀಯ ಪಕ್ಷಗಳು ಧರ್ಮದ ವಿಚಾರವನ್ನು ಚರ್ಚಿಸಲೇಬಾರದು, ಧರ್ಮದ ಆಚರಣೆಯು ಜನರ ಆಯ್ಕೆ ಮತ್ತು ವಿವೇಚನೆಗೆ ಬಿಟ್ಟ ವಿಷಯವಾಗಿದೆ, ಸರ್ವರಿಗೂ ಸಮಬಾಳು ಸಮಪಾಲು ಎಂದು ಸಂವಿಧಾನ ಹೇಳುತ್ತದೆ ಎಂದು ಮಹದೇವಪ್ಪ ಹೇಳಿದರು.

# ಬಾಗಲಕೋಟೆ: 5,71,001 ರೂ.ಗೆ ಮಾಳಿಂಗರಾಯ ಗದ್ದುಗೆ ತೆಂಗಿನಕಾಯಿ ಹರಾಜು



ಬಾಗಲಕೋಟೆ: ಜಮಖಂಡಿ ತಾಲೂಕಿನ ಚಿಕ್ಕಲಕಿ ಗ್ರಾಮದಲ್ಲಿ ನಡೆದ ಮಾಳಿಂಗರಾಯ ಜಾತ್ರೆಯಲ್ಲಿ ಮಾಳಿಂಗರಾಯ ಗದ್ದುಗೆಯ ತೆಂಗಿನಕಾಯಿ ದಾಖಲೆ ಮೊತ್ತಕ್ಕೆ ಹರಾಜು ಆಗಿದೆ.

ವಿಜಯಪುರ ಜಿಲ್ಲೆಯ ತಿಕೋಟಾ ತಾಲೂಕಿನ ತಿಕೋಟಾ ಗ್ರಾಮದ ಭಕ್ತನರಾದ ಮಾಹಾವೀರ ಹರಕೆಯವರು ಹರಾಜಿನಲ್ಲಿ ಈ ತೆಂಗಿನಕಾಯಿಯನ್ನು 5,71,001 ರೂ.ಗೆ ಪಡೆದುಕೊಂಡರು. ಈ ತೆಂಗಿನಕಾಯಿಯನ್ನು ಪಡೆಯಲು ತ್ರಿಕೋನ ಸ್ಪರ್ಧೆ ಏರ್ಪಟ್ಟಿತ್ತು. ಮೂವರಲ್ಲಿ ಇನ್ನಿಬ್ಬರು ಚಿಕ್ಕಲಕಿ ಗ್ರಾಮದ ಮುದುಕಪ್ಪ ಮಾಳಪ್ಪ ಪಟೇದ್ದಾರ ಮತ್ತು ಗೋಠೆ ಗ್ರಾಮದ ಸದಾಶಿವ ಮೈಗೂರರವರ ಮಧ್ಯೆ ಸ್ಪರ್ಧೆ ಏರ್ಪಟ್ಟಿತ್ತು. ತೆಂಗಿನಕಾಯಿಯ ವಿಶೇಷ : ಮಹಿಮಾಂತ ಮಾಳಿಂಗರಾಯ ದೇವರ ಗದ್ದುಗೆ ಮೇಲೆ ಈ ತೆಂಗಿನಕಾಯಿಯನ್ನು ಶ್ರಾವಣ ಮಾಸದ ಒಂದು ತಿಂಗಳ ಕಾಲ ಪೂಜಿಸಲಾಗಿರುತ್ತದೆ. ಇದೇ ಕಾಯಿಯನ್ನು ಹಿಂದೊಮ್ಮೆ ಮಾಹಾವೀರ ಹರಕೆಯವರು ಹರಾಜಿನಲ್ಲಿ 6,50,001 ರೂಪಾಯಿಗೆ ಪಡೆದುಕೊಂಡಿದ್ದರು.

ಈ ಸಂದರ್ಭದಲ್ಲಿ ಮಾಳಿಂಗರಾಯ ಪಟ್ಟದ ದೇವರು ಗುರು ಮುತ್ಯಾ ಬಬಲಾದಿ, ಮಾಳಿಂಗರಾಯ ದೇವರ ಅರ್ಚಕರಾದ ಸಿದ್ದಣ ಪೂಜಾರಿ, ಹಿರಿಯರಾದ ದುಂಡಪ್ಪ ಬಬಲಾದಿ, ಕಲ್ಲಪ್ಪ ಗಿಡಗಿಂಚಿ, ಗಕ್ತ ಸಮೂಹ ಉಪಸ್ಥಿತರಿದ್ದರು.

# ಗಾಳಿ ಸುದ್ದಿಗೆ ಕಿವಿ ಕೊಡಬೇಡಿ : ಡಿವೈಎಸ್ಪಿ

❑ ಸ್ನೇಹಜೀವಿ ನ್ಯೂಸ್

ಕೊಟ್ಟೂರು, .ಆ.25: ಸಾಮಾಜಿಕ ಜಾಲ ತಾಣಗಳಲ್ಲಿ ಕೆಲವೊಂದು ಧರ್ಮ, ಧರ್ಮಗಳ ನಡುವೆ ಅಶಾಂತಿ ಸೃಷ್ಟಿಸುವಂತಹ ಪೋಸ್ಟರ್ಗಳು ಹರಿದಾಡಿದರೆ ಅವುಗಳ ಬಗ್ಗೆ ಗಮನವನ್ನು ಕೊಡಬೇಡಿ, ಆ ಪೋಸ್ಟರ್ ಬಗ್ಗೆ ನಿಮ್ಮ ಪೊಲೀಸ್ ಠಾಣೆಯ ಹತ್ತಿರ ಹೋಗಿ ಸರಿಯೋ ತಪ್ಪು ಎಂಬುದರ ಬಗ್ಗೆ ಮಾಹಿತಿ ತಿಳಿದುಕೊಳ್ಳಿ ಎಂದು ಡಿವೈಎಸ್ಪಿ ಮಲ್ಲೇಶ ದೊಡ್ಡಮನಿ ತಿಳಿಸಿದರು.

ಪಟ್ಟಣದ ಪೊಲೀಸ್ ಠಾಣಾ ಆವರಣದಲ್ಲಿ ನಡೆದ ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ಹಿನ್ನೆಲೆ ಹಮ್ಮಿಕೊಂಡಿದ್ದ ಶಾಂತಿ ಸಭೆ ಉದ್ದೇಶಿಸಿ ಮಾತನಾಡಿದರು.

ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬವನ್ನು ಸೌಹಾರ್ದತೆಯ ಧರ್ಮದ ಇತಿ-ಮಿತಿಯೊಳಗೆ ಆಚರಿಸಬೇಕು ಅನ್ಯ ಧರ್ಮದವರ ಭಾವೈಕ್ಯತೆಗೆ ಧಕ್ಕೆ ಬಂದರೆ ಕಾನೂನು ಕ್ರಮ ಜರುಗಿಸಲಾಗುವುದು, ಗಣೇಶ ಪ್ರತಿಮೆ ಅಳವಡಿಸುವ ಮುನ್ನ ಎತ್ತರವಾದ ತಗಡಿನ ವ್ಯವಸ್ಥೆ ಕಲ್ಪಿಸಿಕೊಳ್ಳುವುದು ಉತ್ತಮ. ಹಾಗೇ ತಾತ್ಕಾಲಿಕವಾಗಿ ಸಿಸಿಟಿವಿ ಕಡ್ಡಾಯವಾಗಿ ಅಳವಡಿಸಬೇಕು. ದೇವರ ಹಬ್ಬಗಳಲ್ಲಿ ಅಕ್ರಮ ಚಟುವಟಿಕೆ ಮಾಡದಂತೆ ಭಕ್ತಿಯಿಂದ ಆಚರಿಸಿ. ಯಾವುದೇ ಕಾರ್ಯಕ್ರಮದ ಸಾಂಸ್ಕೃತಿಕ ಚಟುವಟಿಕೆಗಳನ್ನು ಸಮಯ 9.30ಕ್ಕೆ ಮುಕ್ತಾಯವಾಗಬೇಕು ಎಂದರು.

ಡಿ.ಜೆ.ವ್ಯವಸ್ಥೆ ಹಾಗೂ ಪಟಾಕಿ ಸಿಡಿಸುವುದು ನಿಷೇಧಿಸಿ ಸರ್ಕಾರ ಆದೇಶ ಹೊರಡಿಸಿದೆ ಸರ್ಕಾರದ ಹೊಸ ಹೊಸ ನಿಯಮಗಳ ಅನುಗುಣವಾಗಿ ಪ್ರತಿಯೊಬ್ಬರೂ ಪಾಲನೆ ಮಾಡುವುದು ಅತ್ಯವಶ್ಯಕ. ಗಣೇಶನ ಮೂರ್ತಿ ಅಳವಡಿಸುವವರು ಸಂಘದ ಹಾಗೂ ಸದಸ್ಯರು ವಿವರಗಳನ್ನು ನೀಡಬೇಕು. ಮೂರ್ತಿ ವಿಸರ್ಜನೆ ಮಾಡುವವರೆಗೂ ಸಂಘದ ಸ್ವಯಂ ಸೇವಕರನ್ನು ನೇಮಕ ಮಾಡುವುದು ಕಡ್ಡಾಯವಾಗಿದೆ ಎಂದರು.

ಸಿಪಿಐ ದುರುಗಪ್ಪ ಮಾತಾನಾಡಿ, ಸಾಮಾಜಿಕ ಜಾಲತಾಣದಲ್ಲಿ ಅಹಿತಕರ ಪೋಸ್ಟರ್ ಗಳು ಹಾಕುವುದು ಕಾನೂನು ಬಾಹಿರ ಎಂದರು.



ಇದೆ ವೇಳೆಯಲ್ಲಿ ಪಪಂ.ಮುಖ್ಯ ಅಧಿಕಾರಿ ನಸರುಲ್ಲಾ ಮಾತಾನಾಡಿ ಪರಿಸರ ಮಾಲಿನ್ಯ ನಿರ್ಮಾಣವಾಗದಂತೆ ಪ್ಲಾಸ್ಟಿಕ್ ಗಣೇಶ ಪ್ರತಿಮೆ ಮಾಡಲು ಸಂಪೂರ್ಣ ನಿಷೇಧಿಸಿದೆ ಪರವಾನಿಗೆ ಇಲ್ಲದೆ ಅನಧಿಕೃತ ಫ್ಲೆಕ್ಸ್ ಗಳನ್ನು ಅಳವಡಿಸಬಾರದು ಪ್ರತಿಯೊಬ್ಬರು ನಿಗದಿತ ಸ್ಥಳದಲ್ಲಿ ಮಾತ್ರ ಗಣೇಶವನ್ನು ವಿಸರ್ಜನೆ ಮಾಡಬೇಕು ಎಂದರು.

ಬಿ.ಮರಿಸ್ವಾಮಿ, ಭರಮಪ್ಪ, ಉಜ್ಜಿನಿ ರುದ್ರಪ್ಪ, ಚೆನ್ನಪ್ಪ ಮಾತಾನಾಡಿದರು.

ಇನ್ಸೆಕ್ಟರ್ ಗೀತಾಂಜಲಿ ಶಿಂಧೆ ಸಭೆಯನ್ನು ನಿರೂಪಿಸಿ ವಂದಿಸಿದರು.

ಈ ಸಂದರ್ಭದಲ್ಲಿ ಕೆಇಬಿ ಎಇ. ಚೇತನ್, ಅಗ್ನಿಶಾಮಕದಳದ ಇನ್ಸೆಕ್ಟರ್ ಬಸವರಾಜ್, ಗ್ರಾ.ಪಂ. ಪಿಡಿಒಗಳು, ಗ್ರಾಮಸ್ಥರು, ಊರಿನ ಮುಖಂಡರು, ಮುಂತಾದವರು ಇದ್ದರು.

# ಕರ್ನಾಟಕದ ಶೇ. 85ರಷ್ಟು ವಲಸೆ ಕಾರ್ಮಿಕರು ಈ 6 ರಾಜ್ಯದವರು!



❑ ಸ್ನೇಹಜೀವಿ ನ್ಯೂಸ್

**ಬೆಂಗಳೂರು, ಆಗಸ್ಟ್ 25: ನಮ್ಮ ದೇಶದ ಸುಮಾರು ಒಂದು ಲಕ್ಷ ವಲಸೆ ಕಾರ್ಮಿಕರಿಗೆ ಕರ್ನಾಟಕ ನೆಲೆಯಾಗಿದೆ. ಇದರಲ್ಲಿ ಪ್ರತಿಶತ 85 ರಷ್ಟು ಕಾರ್ಮಿಕರು ಕೇವಲ ಆರು ರಾಜ್ಯಗಳಿಂದ ಬಂದವರಾಗಿದ್ದಾರೆ ಎಂದು ಕಾರ್ಮಿಕ ಇಲಾಖೆಯ ಅಂಕಿ ಅಂಶಗಳ ಪ್ರಕಾರ ತಿಳಿದು ಬಂದಿದೆ.**

ಜೀವನೋಪಾಯಕ್ಕಾಗಿ ಕರ್ನಾಟಕಕ್ಕೆ ಬಂದಿರುವ ವಲಸೆ ಕಾರ್ಮಿಕರ ಪೈಕಿ ಬಿಹಾರ, ಅಸ್ಸಾಂ, ಒಡಿಶಾ, ಜಾರ್ಖಂಡ್, ಪಶ್ಚಿಮ ಬಂಗಾಳ ಮತ್ತು ಉತ್ತರ ಪ್ರದೇಶದಿಂದ ಬಂದವರು ಸಂಖ್ಯೆ ಅತ್ಯಧಿಕವಾಗಿದೆ. ಇದರಲ್ಲಿ ಹೆಚ್ಚಿನ ಸಂಖ್ಯೆಯ ವಲಸೆ ಕಾರ್ಮಿಕರು ಬೆಂಗಳೂರಿನಲ್ಲಿ ಜೀವನ ಸಾಗಿಸುತ್ತಿದ್ದಾರೆ.

ಯಾವುದೇ ಸಮೀಕ್ಷೆ ನಡೆಸಲಾಗದ ಕಾರಣ ರಾಜ್ಯದಲ್ಲಿರುವ ವಲಸೆ ಕಾರ್ಮಿಕರ ಅಂಕಿ ಅಂಶಗಳ ಬಗ್ಗೆ ನಿಖರವಾದ ಮಾಹಿತಿ ದೊರೆತಿಲ್ಲ. ಆದರೆ, ವಿವಿಧ ಕಾನೂನುಗಳ ಅಡಿಯಲ್ಲಿ ಉದ್ಯೋಗದಾತರು ಸಲ್ಲಿಸಿದ ಮಾಹಿತಿಯ ಪ್ರಕಾರ ಇದನ್ನು ಅಧಿಕೃತ ಅಂಕಿ = ಅಂಶಗಳೆಂದು ನಿರ್ಧರಿಸಲಾಗಿದೆ.

ಭಾರತದ ಎಲ್ಲಾ ರಾಜ್ಯಗಳಿಂದ ಕರ್ನಾಟಕಕ್ಕೆ ವಲಸೆ ಬಂದ ಕಾರ್ಮಿಕರು 78,289 ಜನ ಇದ್ದು, ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ 18,865 ವಲಸಿಗರು ನೋಂದಣಿ ಮಾಡಿಕೊಂಡಿದ್ದಾರೆ. ಹೀಗಾಗಿ ಕರ್ನಾಟಕದಲ್ಲಿರುವ ವಲಸಿಗರ ಒಟ್ಟಾರೆ ಸಂಖ್ಯೆಯೂ 97,154 ರಷ್ಟಾಗಿದೆ ಎಂದು ಅಂಕಿ ಅಂಶಗಳಿಂದ ತಿಳಿದು ಬಂದಿದೆ.

ಇನ್ನು ಅಂತಾರಾಜ್ಯ ಕಾರ್ಮಿಕರು ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿಸಿಕೊಳ್ಳಬಹುದು. ಇದರಿಂದಾಗಿ ನೋಂದಾಯಿತ ಕಾರ್ಮಿಕರಿಗೆ ಆರೋಗ್ಯ ರಕ್ಷಣೆ, ಮದುವೆ, ಮಕ್ಕಳ ಶಿಕ್ಷಣ ಸೇರಿದಂತೆ ಇನ್ನಿತರ ಆರ್ಥಿಕ ಪ್ರಯೋಜನಗಳನ್ನು ಪಡೆಯಲು ಇದು ಸಹಕಾರಿಯಾಗಿದೆ.

### ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಾ ಪುರಸ್ಕಾರ, ಸಾಧಕರಿಗೆ-ನಿವೃತ್ತ ನೌಕರರಿಗೆ ಸನ್ಮಾನ

# ಅತ್ಯುನ್ನತ ಸಾಧನೆಗೆ ಶಿಕ್ಷಣವೊಂದೇ ಸಾಧನ : ಸಲೀಂ ಅಹ್ಮದ್










❑ ಸ್ನೇಹಜೀವಿ ನ್ಯೂಸ್

ಗದಗ, ಆ. 25 : ಶಿಕ್ಷಣವೊಂದೇ ಮನುಷ್ಯನನ್ನು ಅತ್ಯುನ್ನತ ಸ್ಥಾನಕ್ಕೆ ತಂದು ನಿಲ್ಲಿಸಬಲ್ಲದು. ಜೀವನದಲ್ಲಿ ಸಾಧನೆಗೆ ಶಿಕ್ಷಣ ರಾಜಮಾರ್ಗ, ಶಿಕ್ಷಣದ ದಾರಿದೀಪದಿಂದಾಗಿ ಬದುಕು ಸುಂದರವಾಗಿ ರೂಪುಗೊಳ್ಳಬಲ್ಲದು ಆದ-ದ್ದರಿಂದ ಪಾಲಕರು ಮಕ್ಕಳ ಉನ್ನತ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದು ವಿಧಾನ ಪರಿಷತ್‌ನ ಮುಖ್ಯ ಸಚೇತಕ ಸಲೀಂ ಅಹ್ಮದ್ ಹೇಳಿದರು.

ಅವರು ರವಿವಾರ ನಗರದ ಕನಕ ಭವನದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) ಬೆಂಗಳೂರು, ಗದಗ ಜಿಲ್ಲಾ ಘಟಕವು 2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ, ಪಿಯುಸಿ ಹೆಚ್ಚು ಅಂಕಗಳನ್ನು ಪಡೆದ ಮುಸ್ಲಿಂ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಾಗರಿಕ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಕಾಲವಿಂದು ಬದಲಾಗಿದೆ ಶೇ. 95 ಸಾಲದು ಸ್ಪರ್ಧಾತ್ಮಕ ಇಂದಿನ ದಿನಗಳಲ್ಲಿ ಎಷ್ಟೇ ಪ್ರತಿಭೆ ಇದ್ದರೂ ಸಾಕಾಗದು ಅದರೊಟ್ಟಿಗೆ ಚಾಣಾಕ್ಷತನ, ವಿಶೇಷ ಪರಿಣಿತಿ ಮುಖ್ಯ ಈ ಎಲ್ಲ ಅಂಶಗಳನ್ನು ಹೊಂದಿರುವ ಅಭ್ಯರ್ಥಿಗೆ ಹೆಚ್ಚಿನ ಬೇಡಿಕೆ ಸಿಗುವದು ಅಂತಹ ಅವಕಾಶಗಳು ಎಲ್ಲ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸಿಗುವಂತಾಗಲಿ ಅವರ ಬದುಕು ಬಂಗಾರವಾಗಲಿ ಎಂದರು.

ಅಲ್ಪಸಂಖ್ಯಾತರ ಅತ್ಯಧಿಕ ಮತಗಳಿಂದಾಗಿ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರದ ಚುಕ್ಕಾಣಿ ಹಿಡಿಯಲು ಸಾಧ್ಯವಾಗಿದೆ. ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದ ಆಡಳಿತ ಪಕ್ಷವಾಗಿದೆ. ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ನೀಡಿ ರಾಜ್ಯವನ್ನು ಶಾಂತಿಯ ತೋಟವನ್ನಾಗಿಸಿದ ಸರ್ಕಾರ ಆಗಿದೆ ಎಂದರು.

ಸಾನಿಧ್ಯ ವಹಿಸಿದ್ದ ಸೂಡಿ ಜುಕ್ತಿ ಹಿರೇಮಠದ ಪೂಜ್ಯ ಡಾ.ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು ಮಾತನಾಡಿ ವಿದ್ಯೆ ನಿರಂತರ ಸಾಧನೆಯಿಂದ ಸಾಕಾರಗೊಳ್ಳಬಲ್ಲದು. ಸಾಧನೆಗೆ ಅಸಾಧ್ಯವಾದದ್ದು ಯವುದೂ ಇಲ್ಲ ಆದರೆ ಸಾಧಿಸಬೇಕೆಂಬ ಉತ್ಕಟ ಛಲ ಬೇಕು ಎಂದರು.

**ಹಿಂದೂ, ಮುಸ್ಲಿಂ, ಕ್ರೈಸ್ತ ಧರ್ಮ ಗುರುಗಳ ಉಪಸ್ಥಿತಿಯ ಸರ್ವಧರ್ಮಿಯರ ಸಾಮರಸ್ಯದ ವೇದಿಕೆ**

ಮಕ್ಕಳಿಗೆ ಆಸ್ತಿ ಸಂಪತ್ತು ಮಾಡಬೇಡಿ ಬದಲಾಗಿ ಅವರನ್ನೇ ಆಸ್ತಿಯನ್ನಾಗಿ ಮಾಡಿ. ಮಕ್ಕಳಿಗೆ ಉತ್ತಮ ಹಾಗೂ ಉನ್ನತ ಶಿಕ್ಷಣ ನೀಡಿ ಆಗ ಅವರು ನಿಮ್ಮ ಕುಟುಂಬಕ್ಕೆ ಅಷ್ಟೇ ಅಲ್ಲ ಸಮಾಜ ದೇಶಕ್ಕೆ ಬಹು ದೊಡ್ಡ ಆಸ್ತಿಯಾಗಬಲ್ಲರು. ಇಂದಿಲ್ಲಿ ಪ್ರತಿಭಾ ಪುರಸ್ಕಾರ ಪಡೆದುಕೊಂಡ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಈ ಸನ್ಮಾನ ಸಾಧನೆಗೆ ಮುನ್ನುಡಿ ಅಷ್ಟೇ ಎಂದರು.

ಶಿಕ್ಷಣ ಪಡೆದು ಉನ್ನತ ಹುದ್ದೆಯನ್ನು ಪಡೆದುಕೊಳ್ಳುವ ವಿದ್ಯಾರ್ಥಿಗಳು ಭವಿಷ್ಯದಲ್ಲಿ ತಂದೆ ತಾಯಿಯನ್ನು, ದೇಶವನ್ನು ಚೆನ್ನಾಗಿ ನೋಡಿಕೊಳ್ಳಿ ಎಂದರಲ್ಲದೆ ಈ ಸಂಘಟನೆ ಉತ್ತಮವಾಗಿ ಕಾರ್ಯ ಮಾಡುತ್ತಿದ್ದು ಬರಲಿರುವ ದಿನಗಳಲ್ಲಿ ಸಂಘಟನೆ ಇನ್ನೂ ಬಲಿಷ್ಠಗೊಳ್ಳಲಿ ಎಂದರು.

ಸಮ್ಮುಖ ವಹಿಸಿದ್ದ ಅಡವೀಂದ್ರ ಸ್ವಾಮಿಮಠದ ಧರ್ಮದರ್ಶಿ ಪೂಜ್ಯ ಮಹೇಶ್ವರ ಸ್ವಾಮಿಗಳು, ಬಳಗಾನೂರಿನ ಮೌಲಾನಾ ಇನಾಯತ್‌ವುಲ್ಲಾ ಫೀರಜಾದೆ ಹಾಗೂ ಗದಗ ಗ್ರೇಸ್ ಇಸಿಐ ಚರ್ಚ್‌ನ ಸಭಾ ಪಾಲಕರಾದ ರೆವರೆಂಡ್ ವಸಂತರಾಜ ಮಾತನಾಡಿ ಮಕ್ಕಳ ಭವಿಷ್ಯ ಉತ್ತಮಗೊಳ್ಳಲಿ ಎಂದು ಹೇಳಿ ಸಂಘಟನೆಯ ಕಾರ್ಯಚಟುವಟಿಕೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಅಧ್ಯಕ್ಷತೆಯನ್ನು ಸಂಘದ ಜಿಲ್ಲಾ ಅಧ್ಯಕ್ಷ ಡಾ.ಸಿ.ಎಂ.ರಫೀ ವಹಿಸಿದ್ದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಕೆಪಿಸಿಸಿ ಜನರಲ್ ಸೆಕ್ರೆಟರಿ ಎಸ್.ಡಿ.ಮಕಾಂದಾರ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ, ಕೆಪಿಸಿಸಿ ಕಾರ್ಮಿಕ ವಿಭಾಗದ ರಾಜ್ಯ ಉಪಾಧ್ಯಕ್ಷ ನೂರಅಹ್ಮದ್ ಕರ್ಜಗಿ, ರಾಜ್ಯ ಅಲ್ಪ ಸಂಖ್ಯಾತರ ಆಯೋಗದ ಸದಸ್ಯ ಎಂ.ಎಂ.ಕಾಗದಗಾರ ಮುಖ್ಯ ಅತಿಥಿಗಳಾಗಿ ಸಂಘಟನೆ, ಶಿಕ್ಷಣ, ವಿದ್ಯಾರ್ಥಿಗಳ ಭವಿಷ್ಯ, ಸಾಧಕರ ಬಗ್ಗೆ ಮಾತನಾಡಿದರು.

ಮಾಜಿ ಸಂಸದ ಐ.ಜಿ.ಸನದಿ, ಸಂಘದ ಸಂಸ್ಥಾಪಕ, ರಾಜ್ಯ ಅಧ್ಯಕ್ಷ ಮೊಹ್ಮದ್‌ಸಲೀಂ ಹಂಚಿನಮನಿ, ಪ್ರಧಾನ ಕಾರ್ಯದರ್ಶಿ ಡಾ.ಇಸ್ಮಾಯಿಲ್ ಪಾಷಾ, ಕಾರ್ಯಾಧ್ಯಕ್ಷ ಅಬ್ದುಲ್‌ಖಾದರ ಮೇಣಸಗಿ, ಉಪಾಧ್ಯಕ್ಷರಾದ ಶ್ರೀಮತಿ ಫರಹತ ಜಲಗೇರಿ, ನಿಯಾಜಅಹ್ಮದ್ ಹಂಚಿನಮನಿ, ಡಿಡಿಪಿಐ ಆರ್.ಎಸ್.ಬುರಡಿ ಉಪಸ್ಥಿತರಿದ್ದರು. ಡಿಎಸ್ಪಿ ಮುರ್ತುಜಾ ಖಾದ್ರಿ ಉಪನ್ಯಾಸ ನೀಡಿದರು.

ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಿವೃತ್ತ ಮುಸ್ಲಿಂ ನೌಕರರಿಗೆ ಸನ್ಮಾನ, ಸಾಧಕರಿಗೆ ಸನ್ಮಾನ ಜರುಗಿತು. ನಜೀರ್‌ಅಹ್ಮದ್ ಮುಲ್ಲಾ, ಶ್ರೀಮತಿ ಬಿ.ಎಂ. ಮುಲ್ಲಾ, ಶ್ರೀಮತಿ ಶಿರಹಟ್ಟಿ ಪ್ರಾರ್ಥಿಸಿದರು, ಫಜಲ್‌ಅಹ್ಮದ್ ನಮಾಜಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀಮತಿ ಫರಹತ ಜಲಗೇರಿ ನಿರೂಪಿಸಿದರು, ಮೋದಿನಸಾಬ ಬುಕಿಟಗಾರ ವಂದಿಸಿದರು.

## ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗೆ ಸರ್ಕಾರದಿಂದ ದೊರೆಯುವ ಸೌಲಭ್ಯಗಳು

❑ ಸ್ನೇಹಜೀವಿ ನ್ಯೂಸ್

ಗದಗ, ಆ. 25 : ಜಿಲ್ಲೆಯಲ್ಲಿ ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗೆ ಸರ್ಕಾರದಿಂದ ಈ ಕೆಳಕಂಡ ಸೌಲಭ್ಯಗಳಿದ್ದು ಅರ್ಹ ಫಲಾನುಭವಿಗಳು ಸೌಲಭ್ಯಗಳನ್ನು ಪಡೆಯಬಹುದಾಗಿದೆ.

ಅಲೆಮಾರಿ/ ಅರೆ ಅಲೆಮಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ : ಅಲೆಮಾರಿ / ಅರೆ ಅಲೆಮಾರಿ ಜನಾಂಗಕ್ಕೆ ಸೇರಿದ ವಿದ್ಯಾರ್ಥಿಗಳ ಮಾಧ್ಯಮಿಕ ಹಾಗೂ ಪ್ರೌಢಶಿಕ್ಷಣಕ್ಕೆ ಆರ್ಥಿಕ ನೆರವು ನೀಡುವುದರ ಮೂಲಕ ಮಧ್ಯದಲ್ಲಿ ಶಾಲೆ ಬಿಡುವವರ ಪ್ರಮಾಣ ಕಡಿಮೆ ಮಾಡಲು ಹಾಗೂ ಶಿಕ್ಷಣ ಹಂತ ಮುಂದುವರೆಸುವ ಉದ್ದೇಶದಿಂದ ಈ ಕಾರ್ಯಕ್ರಮ ಜಾ-ರಿಗೊಳಿಸಲಾಗಿದೆ.

ಮೆಟ್ರಿಕ್ ಪೂರ್ವ ಶಿಷ್ಯವೇತನ : 1 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ 200 ರೂ.ಗಳಂತೆ 10 ತಿಂಗಳು ನೀಡಲಾಗುತ್ತದೆ.

ಅರ್ಹತೆಗಳು: ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿರಬೇಕು. ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.2.00 ಲಕ್ಷ , ಹಿಂದಿನ ವರ್ಷದಲ್ಲಿ ಎಲ್ಲ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು. ಸರ್ಕಾರಿ/ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು.

ಸಲ್ಲಿಸಬೇಕಾದ ದಾಖಲೆಗಳು: ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾರ್ಷಿಕ ಪರೀಕ್ಷೆಯಲ್ಲಿ ಪಾಸಾದ ಅಂಕ ಪಟ್ಟಿ , ಆನ್ ಲೈನ್ ನಲ್ಲಿ ಶಾಲಾ ಮುಖ್ಯಸ್ಥರ ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ಆಯಾ ಶಾಲಾ ಮುಖ್ಯೋಪಾಧ್ಯಾಯರು/ ತಾಲೂಕು ಬಿ.ಇ.ಓ/ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ಅಲೆಮಾರಿ/ ಅರೆ ಅಲೆಮಾರಿ ಮೆಟ್ರಿಕ್ ನಂತರ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ : ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿದ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ಶಿಕ್ಷಣವನ್ನು ಮುಂದುವರೆಸಲು ಆರ್ಥಿಕ ನೆರವು ನೀಡುವುದರ ಮೂಲಕ ಮಧ್ಯದಲ್ಲಿ ಕಾಲೇಜು ಬಿಡುವವರ ಪ್ರಮಾಣ ಕಡಿಮೆ ಮಾಡಲು ಹಾಗೂ ಈ ಶಿಕ್ಷಣ ಹಂತ ಮುಂದುವರೆಸುವ ಉದ್ದೇಶದಿಂದ ಕಾರ್ಯಕ್ರಮ ಜಾರಿಗೊಳಿಸಲಾಗಿದೆ.

ಮೆಟ್ರಿಕ್ ನಂತರ ಶಿಷ್ಯವೇತನ : ಪಿಯುಸಿ ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳಿಗೆ 300 ರೂ, ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ 400 ರೂ, ಸಿಇಟಿ ಮೂಲಕ ಸರ್ಕಾರಿ ಕೋಟಾದಲ್ಲಿ ಬಿಇ ಎಂ, ಬಿ.ಬಿ.ಎಸ್, ಬಿ.ಡಿ.ಎಸ್. ತತ್ಸಮಾನವಾದ ಇನ್ನಿತರ ತಾಂತ್ರಿಕ / ವೃತ್ತಿಪರ ಕೋರ್ಸುಗಳಿಗೆ 500 ರೂ. 10 ತಿಂಗಳು ನೀಡಲಾಗುತ್ತಿದೆ.

ಅರ್ಹತೆಗಳು: ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿರಬೇಕು. ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.2.50 ಲಕ್ಷ ರೂ.ಒಳಗಿರಬೇಕು. ಹಿಂದಿನ ವರ್ಷದಲ್ಲಿ ಎಲ್ಲ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು. ಸರ್ಕಾರಿ/ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು. ವಿದ್ಯಾರ್ಥಿಯು ಇನ್ನಾವುದೇ ವಿದ್ಯಾರ್ಥಿ ವೇತನ ಅಥವಾ ಉಚಿತ ವಸತಿ ನಿಲಯದಲ್ಲಿ ಪ್ರವೇಶ ಪಡೆದಿರಬಾರದು.

ಸಲ್ಲಿಸಬೇಕಾದ ದಾಖಲೆಗಳು: ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾರ್ಷಿಕ ಪರೀಕ್ಷೆಯಲ್ಲಿ ಪಾಸಾದ ಅಂಕಪಟ್ಟಿ, ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗಾಗಿ ಆಯಾ ತಾಲೂಕಾ ಹಿಂದುಳಿದ ವರ್ಗಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗೆ ನಿವೇಶನ ಹಂಚಿಕೆಗಾಗಿ ಜಮೀನು ಖರೀದಿ : ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಹೆಚ್ಚಿನ ಕುಟುಂಬಗಳು ನಿವೇಶನವಿಲ್ಲದ ವಸತಿ ಸೌಲಭ್ಯವನ್ನು ಪಡೆಯಲು ಸಾಧ್ಯವಾಗುತ್ತಿಲ್ಲ. ಇವರನ್ನು ಒಂದು ಕಡೆ ನೆಲೆ ನಿಲ್ಲುವಂತೆ ಮಾಡಲು ನಿವೇಶನವನ್ನು ಒದಗಿಸಿ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರಿ ಜಮೀನನ್ನು ಗುರುತಿಸಿ ಹಂಚುವ ಉದ್ದೇಶದಿಂದ ಕಾರ್ಯಕ್ರಮ ಜಾರಿಗೊಳಿಸಲಾಗಿದೆ.

ಅಲೆಮಾರಿ ಜನಾಂಗದವರಿಗೆ ನಿವೇಶನರಹಿತರಿಗೆ ಸರ್ಕಾರದಿಂದ ಉಚಿತವಾಗಿ ನಿವೇಶನ ಒದಗಿಸುವುದು. ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿರಬೇಕು. ಅಭ್ಯರ್ಥಿಯ ಹೆಸರಿನಲ್ಲಿ ನಿವೇಶನ ಇರಬಾರದು. ಹೆಚ್ಚಿನ ವಿವರಗಳಿಗಾಗಿ ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಆಯಾ ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣಾದಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ವಸತಿ ಸೌಲಭ್ಯ: ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗಾಗಿ ನಿವೇಶನ ರಹಿತರಿಗೆ ಹಾಗೂ ಗುಡಿಸಲುಗಳಲ್ಲಿ ವಾಸಿಸುತ್ತಿರುವವರಿಗೆ ನಿರ್ದಿಷ್ಟ ನೆಲೆಯಿಲ್ಲದೇ ಒಂದು ಪ್ರದೇಶದಿಂದ ಇನ್ನೊಂದು ಪ್ರದೇಶಕ್ಕೆ ವಲಸೆ ಹೋಗುವವರಿಗೆ ಒಂದೆ ಕಡೆ ನೆಲೆ ನಿಲ್ಲುವಂತೆ ಮಾಡುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ಸೌಲಭ್ಯಗಳು: ವಸತಿ ರಹಿತ ಹಾಗೂ ಗುಡಿಸಲುಗಳಲ್ಲಿ ವಾಸಿಸುತ್ತಿರುವ ನಿವೇಶನ ರಹಿತರಿಗೆ ಎಲ್ಲ ಮೂಲಭೂತ ಸೌಲಭ್ಯಗಳನ್ನು ಒಳಗೊಂಡ ಮನೆಗಳನ್ನು ಒದಗಿಸಲಾಗುವುದು.

ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿರಬೇಕು. ಅಭ್ಯರ್ಥಿಯ ಹೆಸರಿನಲ್ಲಿ ನಿವೇಶನ ಇರಬಾರದು. ಹೆಚ್ಚಿನ ವಿವರಗಳಿಗೆ ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಥವಾ ಆಯಾ ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾ-ರಿಗಳನ್ನು ಸಂಪರ್ಕಿಸಬಹುದಾಗಿದೆ.

## ಶಿಕ್ಷಣ ಹಾಗೂ ಧರ್ಮ ಕಾರ್ಯಕ್ಕೆ ಜಮೀನು ದಾನ ನೀಡಿದ ದಾನಿಗೆ ಸನ್ಮಾನ




❑ ಸ್ನೇಹಜೀವಿ ನ್ಯೂಸ್

ಗದಗ, ಆ. 25 : ಜಿಲ್ಲೆಯ ಶಿರಹಟ್ಟಿ ಪಟ್ಟಣದ ನಿವಾಸಿ ರಶೀದ್ ಥಾಲಾಯತ್ ಅವರು (ಎಡದಿಂದ ಎರಡನೆಯ ವ್ಯಕ್ತಿ) ತಮ್ಮ 3 ಎಕರೆ ಜಮೀನನ್ನು ಶಿಕ್ಷಣ ಮತ್ತು ಧರ್ಮ ಕಾರ್ಯಕ್ಕೆ ದಾನ ನೀಡಿ ದಾನಿಗೆ ಹಾಗೂ ಇತರ ಸಾಧಕ ಮಹನೀಯರನ್ನು ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) ಬೆಂಗಳೂರು, ಗದಗ ಜಿಲ್ಲಾ ಘಟಕವು ಸನ್ಮಾನಿಸಿ ಗೌರವಿಸಿತು.

ಮೂರು ಜಮೀನ್‌ದಲ್ಲಿ 1 ಎಕರೆ ಐಟಿಐ ಕಾಲೇಜ್‌ಗಾಗಿ, 1 ಎಕರೆ ಮೌಲಾನಾ ಆಝಾದ್ ಶಾಲೆಗಾಗಿ ಹಾಗೂ 1 ಎರೆ ಜಮೀನನ್ನು ಅರಬ್ಬಿ ಮದರಸಾಕ್ಕೆ ದಾನ ನೀಡಿದ್ದಕ್ಕೆ ರವಿವಾರ ಗದುಗಿನ ಕನಕ ಭವನದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) ಬೆಂಗಳೂರು, ಗದಗ ಜಿಲ್ಲಾ ಘಟಕವು ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ, ನಾಗರಿಕ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭದಲ್ಲಿ ಧರ್ಮ ಗುರುಗಳ ಹಾಗೂ ಗಣ್ಯಮಹನೀಯರ ಉಪಸ್ಥಿತಿಯಲ್ಲಿ ಸನ್ಮಾನಿಸಲಾಯಿತು. ಸಮಾರಂಭದಲ್ಲಿ ಸಂಘದ ರಾಜ್ಯ ಮತ್ತು ಗದಗ ಜಿಲ್ಲಾ ಘಟಕದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ದೇಸಿ ತರಬೇತಿ ಪ್ರಮಾಣ ಪತ್ರ ವಿತರಣೆ



❑ ಸ್ನೇಹಜೀವಿ ನ್ಯೂಸ್

ಗದಗ, ಆ. 25 : ಐ.ಸಿ.ಎ.ಆರ್-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ, ಕೃಷಿ ವಿಶ್ವವಿದ್ಯಾಲಯ, ಧಾರವಾಡ, ಕೃಷಿ ಇಲಾಖೆ, ಗದಗ ಹಾಗೂ ಮ್ಯಾನೇಜ್, ಹೈದರಾಬಾದ ಇವರ ಸಂಯುಕ್ತಾಶ್ರಯದಲ್ಲಿ ನಡೆದ 2023-24 ನೇ ಸಾಲಿನ ಕೃಷಿ ಪರಿಕರ ಮಾರಾಟಗಾರರಿಗೆ ಒಂದು ವರ್ಷದ ದೇಸಿ ತರಬೇತಿಯ ಪ್ರಮಾಣ ಪ್ರಮಾಣ ಪತ್ರ ವಿತರಣಾ ಸಮಾರಂಭ ಹುಲಕೋಟಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ನೆರವೇರಿತು.

ಈ ಕಾರ್ಯಕ್ರಮದಲ್ಲಿ ಕೃಷಿ ವಿಶ್ವವಿದ್ಯಾಲಯ, ಧಾರವಾಡದ ವಿಸ್ತರಣಾ ನಿರ್ದೇಶಕರಾದ ಡಾ.ಎಮ್.ವ್ಹಿ.ಮಂಜುನಾಥ ಇವರು ಉದ್ಘಾಟನೆ ನೆರವೇರಿಸಿ, ಶಿಬಿರಾರ್ಥಿಗಳನ್ನುದ್ದೇಶಿಸಿ ಮಾತನಾಡಿದರು. ಕೃಷಿ ಪರಿಕರ ಮಾರಾಟಗಾರರು ರೈತರ ನೇರ ಸಂಪರ್ಕದಲ್ಲಿರುವದ-ರಿಂದ, ಅವರಿಗೆ ಅವಶ್ಯವಿರುವ ಸಲಹೆಗಳನ್ನು ಸೂಕ್ತ ರೀತಿಯಲ್ಲಿ ನೀಡಲು ದೇಸಿ ತರಬೇತಿ ಬಹಳ ಸಹಕಾರಿಯಾಗಿದೆ ಎಂದರು. ರೈತರಿಗೆ ಬೇಕಾಗಿರುವ ಪರಿಕರಗಳನ್ನಷ್ಟೇ ಅಲ್ಲದೇ ಕಾಲಕಾಲಕ್ಕೆ ಬೆಳೆಗಳ ಕುರಿತು ತಾಂತ್ರಿಕ ಸಲಹೆಗಳನ್ನೂ ನೀಡಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ. ಎಸ್. ಎನ್. ಜಾಧವ್, ರೈತರ ಸೇವೆ ದೇವರ ಸೇವೆಗೆ ಸಮಾನವಾಗಿರುವುದರಿಂದ ಶ್ರದ್ಧೆ ಮತ್ತು ನಿಷ್ಠೆಯಿಂದ ಕಾರ್ಯ ನಿರ್ವಹಿಸಬೇಕೆಂದು ಕಿವಿಮಾತು ಹೇಳಿದರು ಹಾಗೂ ಪ್ರಮಾಣಪತ್ರ ಪಡೆದ ಅಭ್ಯರ್ಥಿಗಳಿಗೆ ಸೇವಾ ಪ್ರಮಾಣವಚನ ಬೋಧಿಸಿದರು. ಉಪ ಕೃಷಿ ನಿರ್ದೇಶಕರಾದ ಶ್ರೀಮತಿ ಸ್ಫೂರ್ತಿ ಜಿ.ಎಸ್. ಇವರು ಮಾತನಾಡಿ ಕೃಷಿ ಪರಿಕರ ಮಾರಾಟಗಾರರು ರೈತರು ಮತ್ತು ಕೃಷಿ ಇಲಾಖೆ, ಕೃಷಿ ವಿಶ್ವವಿದ್ಯಾಲಯ ಹಾಗೂ ಕೃಷಿ ವಿಜ್ಞಾನ ಕೇಂದ್ರಗಳ ನಡುವೆ ಕೊಂಡಿಯಾಗಿ ವಿಸ್ತರಣಾ ಸೇವೆಯಲ್ಲಿ ನಿರತರಾಗಬೇಕು ಎಂದರು. ಅಲ್ಲದೇ ಕೃಷಿ ಪರಿಕರಗಳಾದ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳ ವ್ಯವಹಾರವನ್ನು ರಚಿತ/ನಿರ್ದಿಷ್ಟ ಕಾನೂನಿನ ಚೌಕಟ್ಟಿನಲ್ಲಿ ನಿರ್ವಹಿಸಬೇಕು ಎಂದು ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ.ಸುಧಾ ವ್ಹಿ. ಮಂಕಣಿ, ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ದೇಸಿ ತರಬೇತಿಯ ಪ್ರಮಾಣಪತ್ರ ಪಡೆದ ಅಭ್ಯರ್ಥಿಗಳಿಗೆ ಅಭಿನಂದಿಸಿ, ಈ ತರಬೇತಿಯಿಂದ ಪಡೆದ ಜ್ಞಾನವನ್ನು ರೈತರಿಗೆ ಸೂಕ್ತ ರೀತಿಯಲ್ಲಿ ತಲುಪಿಸುವಲ್ಲಿ ಕೃಷಿ ಪರಿಕರ ಮಾರಾಟಗಾರರ ಪಾತ್ರ ಬಹಳ ಮುಖ್ಯ ಎಂದು ಅಭಿಪ್ರಾಯ ಪಟ್ಟರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯ ಒಟ್ಟು 38 ದೇಸಿ ಅಭ್ಯರ್ಥಿಗಳಿಗೆ ಪ್ರಮಾಣಪತ್ರ ನೀಡಲಾಯಿತು. ದೇಸಿ ತರಬೇತಿಯ ಫೆಸಿಲಿಟೇಟರ್ ಆದ ಎಸ್.ಕೆ.ಮುದ್ಲಾಪೂರ ಇವರು ದೇಸಿ ಕೋರ್ಸ ಕುರಿತು ಸಂಕ್ಷಿಪ್ತ ಪ್ರಸ್ತಾವಿಕ ನುಡಿಗಳನ್ನು ಹೇಳಿದರು. ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ಶ್ರೀಮತಿ ಹೇಮಾವತಿ ಹಿರೇಗೌಡರ್ ಸ್ವಾಗತಿಸಿದರು, ಎನ್.ಎಚ್.ಭಂಡಿ ವಂದಿಸಿದರು ಹಾಗೂ ಡಾ. ವಿನಾಯಕ ನಿರಂಜನ್ ಕಾರ್ಯಕ್ರಮವನ್ನು ನಿರೂಪಿಸಿದರು.

# ಪತಿ-ಪತ್ನಿ ಅರಿತು ನಡೆದರೆ ಬಾಳು ಬಂಗಾರ

## ನಾಗಾವಿ ಗ್ರಾಮದಲ್ಲಿ ಪುರಾಣ ಮಂಗಲೋತ್ಸವ : ಸರ್ವಧರ್ಮಗಳ ಸಾಮೂಹಿಕ ವಿವಾಹ

❑ ಸ್ನೇಹಜೀವಿ ನ್ಯೂಸ್

ಗದಗ, ಆ. 25 :ಇಂದಿನ ಆಧುನಿಕ ಸಮಾಜದಲ್ಲಿ ಪತಿ ಹಾಗೂ ಪತ್ನಿ ಒಬ್ಬರಿಗೊಬ್ಬರು ಅರಿತು ನಡೆದರೆ ಅವರ ಬಾಳು ಬಂಗಾರವಾಗುತ್ತದೆ ಎಂದು ನಗರದ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಶ್ರೀ ಕಲ್ಲಯ್ಯಜ್ಜನವರು ಹೇಳಿದರು.

ತಾಲೂಕಿನ ನಾಗಾವಿ ಗ್ರಾಮದಲ್ಲಿ ಶ್ರೀ ಶರಣಬಸವೇಶ್ವರ ಪುರಾಣ ಕಾರ್ಯಕ್ರಮ ಮಂಗಲೋತ್ಸವದಲ್ಲಿ ಜರುಗಿದ ಸರ್ವಧರ್ಮಗಳ ಸಾಮೂಹಿಕ ವಿವಾಹ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ವೀರೇಶ್ವರ ಪುಣ್ಯಾಶ್ರಮದ ಹಿಂದಿನ ಗುರುಗಳಾದ ಪಂ.ಪುಟ್ಟರಾಜ ಕವಿ ಗವಾಯಿಗಳವರ ಕಾಲದಿಂದಲೂ ನಾಗಾವಿ ಗ್ರಾಮವನ್ನು ತಮ್ಮ ತವರುಮನೆ ಎಂದೇ ಭಾವಿಸಿ ಪ್ರತಿವರ್ಷ ಗ್ರಾಮದ ಜನತೆಗೆ ದರ್ಶನಾಶೀರ್ವಾದವನ್ನು ನೀಡುತ್ತಿದ್ದರು. ಅದೇ ಪರಂಪರೆಯನ್ನು ಮುಂದುವರೆಸಿಕೊಂಡು ತಮ್ಮನ್ನು ನಾಗಾವಿ ಗ್ರಾಮಕ್ಕೆ ಆಹ್ವಾನಿಸುತ್ತಿರುವುದು ಸಂತಸದ ವಿಷಯ. ಮುಸ್ಲಿಂ ಸಮಾಜದ ಪೀರಸಾಬ ದಾವಲಸಾಬ ಪೀರಖಾನವರ ಅವರು ತಮಗೆ ತುಲಾಭಾರ ನೆರವೇ-ರಿಸುವ ಮೂಲಕ ಭಾವೈಕ್ಯತೆಗೆ ಶ್ರೀಕಾರ ಹಾಕಿದ್ದಾರೆ ಎಂದು ಕಲ್ಲಯ್ಯಜ್ಜನವರು ಹೇಳಿದರು.

ಸರ್ವಧರ್ಮದ ನವ ವಧು-ವರರಿಗೆ ಕಲ್ಲಯ್ಯಜ್ಜನವರು ಸೇರಿದಂತೆ ಗ್ರಾಮದ ಗುರುಹಿರಿಯರು, ಗಣ್ಯರು ಶುಭ ಹಾರೈಸಿದರು.

ಪುರಾಣ ಸಮಿತಿ ಮುಖ್ಯಸ್ಥರಾದ ತಾಪಂ ಮಾಜಿ ಅಧ್ಯಕ್ಷರಾದ ಬಸವಣ್ಣೆಪ್ಪ ಚಿಂಚಲಿ ಮಾತನಾಡಿ, ಜಾತಿ, ಪಂಥಗಳ ಬೇಧಭಾವವಿಲ್ಲದೇ ಇಡೀ ಗ್ರಾಮದ ಸದ್ಭಕ್ತರು ಒಂದುಗೂಡಿ, ಕಳೆದ 44 ವರ್ಷಗಳಿಂದ ಕಲಬುರ್ಗಿ ಶರಣಬಸವೇಶ್ವರ ಪುರಾಣ ಹಾಗೂ 14 ವರ್ಷಗಳಿಂದ ಜಾತ್ರಾ ಮಹೋತ್ಸವ ನಡೆಸಿಕೊಂಡು ಬರಲಾಗುತ್ತಿದೆ.. ಇಂತಹ ಆಧ್ಯಾತ್ಮಿಕ ಚಿಂತನೆಯ ಕಾರ್ಯಕ್ರಮಗಳು ಗ್ರಾಮದ ಸದ್ಭಕ್ತರು, ರೈತರು, ಯುವಕರು, ಮಹಿಳೆಯರಿಗೆ



### ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಕಲ್ಲಯ್ಯಜ್ಜನವರ ನುಡಿ

ಸದುಪಯೋಗವಾಗುತ್ತಿವೆ ಎಂದು ಹೇಳಿದರು.

ಶರಣಬಸವೇಶ್ವರ ಪುರಾಣ ಪಠಣವನ್ನು ಗ್ರಾಮದ ಗಂಗಾಧರೇಶ್ವರ ಮಠದ ವೇದಮೂರ್ತಿ ಮೃತ್ಯುಂಜಯಸ್ವಾಮಿ ಹಿರೇಮಠ, ಪುರಾಣ ಪ್ರವಚನವನ್ನು ವೇದಮೂರ್ತಿ ಮಂಜಯ್ಯಸ್ವಾಮಿ ಹಿರೇಹಾಳ ನೆರವೇರಿಸಿದರು. ಸಂಗೀತ ಸೇವೆಯನ್ನು ನೀಡಿದ ಬಿ.ಎಸ್. ಹೊಂಬಳ ಹಾಗೂ ರಾಜಶೇಖರ ಸಂಗಳಕರ ಕನ್ನೂರಬಸವಣ್ಣ ದೇವರಿಗೆ ನಿತ್ಯ ಅಭಿಷೇಕ ಸೇವೆಗೈದ ಸಂತೋಷಸ್ವಾಮಿ ಹಿರೇಮಠ, ತುಲಾಭಾರ ಸೇವೆಗೈದ ಪೀರಖಾನವರ ಕುಟುಂಬದವರನ್ನು ಕಲ್ಲಯ್ಯಜ್ಜನವರು ಸನ್ಮಾನಿಸಿದರು.

ಶರಣಬಸವೇಶ್ವರ ಪುರಾಣ ಸಮಿತಿ,ಬಸವೇಶ್ವರ ಭಜನಾ ಸಂಘ, ಗಂಗಾಧರೇಶ್ವರ ಯುವಕ ಮಂಡಳ, ಗ್ರಾಮದ ಸರ್ವ ಸದ್ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಮಲ್ಲಪ್ಪ ಗೋಲಪ್ಪನವರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಇದೇ ಸಂದರ್ಭದಲ್ಲಿ ಸದ್ಭಕ್ತರಿಗೆ ಮಹಾದಾಸೋಹ ಜರುಗಿತು. ಸಾಯಂಕಾಲ ಗ್ರಾಮದ ಸದ್ಭಕ್ತರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ರಥೋತ್ಸವ ಸಡಗರ, ಸಂಭ್ರಮದಿಂದ ಜರುಗಿತು.

# ಪತ್ರಿಕೆ ಓದುವ ಹವ್ಯಾಸ ಬೆಳೆಸಿಕೊಳ್ಳಿ



❑ ಸ್ನೇಹಜೀವಿ ನ್ಯೂಸ್

ನರೇಗಲ್ಲ, ಆ. 25 : ವಿದ್ಯಾರ್ಥಿ ಜೀವನದಲ್ಲಿ ಓದುವ ಹಾಗೂ ಬರೆಯುವ ಹವ್ಯಾಸವನ್ನು ಇಟ್ಟುಕೊಳ್ಳಬೇಕು ಸಾಧಕರ ಜೀವನ ಚರಿತ್ರೆಗಳನ್ನು ಓದುವ ಮೂಲಕ ಸ್ಫೂರ್ತಿ ಪಡೆದುಕೊಳ್ಳಬೇಕು ಎಂದು ಪೊಲೀಸ್ ಠಾಣೆಯ ಪಿಎಸ್ಐ ಐಶ್ವರ್ಯ ನಾಗರಾಳ ಹೇಳಿದರು.

ನರೇಗಲ್ ಪಟ್ಟಣದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದಲ್ಲಿ ವಿದ್ಯಾರ್ಥಿಗಳ ಕಲಿಕಾ ಪ್ರಗತಿಗಾಗಿ ಭಾನುವಾರ ಬೆಳಿಗ್ಗೆ ಆಯೋಜನೆ ಮಾಡಲಾಗಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ವಿಯಾಗಬೇಕಾದರೆ ಕನಿಷ್ಠ ಐದು ಪತ್ರಿಕೆಗಳನ್ನು ಓದುವ ಹಾಗೂ ಪ್ರೌಢಶಾಲಾ ಹಂತದಲ್ಲಿ ಒಂದು ಪತ್ರಿಕೆಯ ಎಲ್ಲಾ ಪುಟಗಳನ್ನು ಓದುವ ಹವಾಸವನ್ನು ರೂಢಿಸಿಕೊಳ್ಳಬೇಕು. ಗಣಿತ, ವಿಜ್ಞಾನ, ಇಂಗ್ಲಿಷ್‌ನಂತ ವಿಷಯಗಳನ್ನು ಪದೆಪದೇ ಬಿಡಿಸುವ ಮೂಲಕ ಸರಳೀಕರಣಕ್ಕೆ ಮುಂದಾಗಬೇಕು ಎಂದು ಸಲಹೆ ನೀಡಿದರು. ಹಾಸ್ಟೆಲ್‌ನಲ್ಲಿ ಕಲಿಯಲು ಬಂದಿರುವ ಪ್ರತಿ ಮಗುವಿನ ಪಾಲಕರು ಶ್ರಮಿಕರಾಗಿದ್ದಾರೆ ಅವರ ಜೀವನ ದುಡಿಮೆ ಮೇಲೆ ಅವಲಂಬನೆಯಾಗಿರುತ್ತದೆ. ಅದನ್ನು ಗಮನದಲ್ಲಿಟ್ಟುಕೊಂಡು ಸಾಮಾಜಿಕ ಹಾಗೂ ಮೊಬೈಲ್ ಸಹವಾಸಕ್ಕೆ ಹೋಗದೆ ಅಭ್ಯಾಸದ ಕಡೆಗೆ ಮಹತ್ವ ನೀಡಬೇಕು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಹಿರಿಯ ವೈದ್ಯ ಡಾ. ಕೆ. ಬಿ. ಧನ್ನೂರ, ಪ್ರತಿದಿನ ಬೆಳಿಗ್ಗೆ ಬೇಗ ಎದ್ದು ಯೋಗ, ವ್ಯಾಯಾಮ, ಪ್ರಾರ್ಥನೆ ಮಾಡುವ ಗುಣಗಳನ್ನು ಬೆಳಸಿಕೊಳ್ಳಬೇಕು. ಚೆನ್ನಾಗಿ ಓದಿ ಸಾಧನೆ ಮಾಡುವ ಮೂಲಕ ಹಾಸ್ಟೆಲ್ ಹಾಗೂ ನಿಮ್ಮೂರಿನ ಕೀರ್ತಿಯನ್ನು ಹೆಚ್ಚಿಸಬೇಕು ಎಂದು ಸಲಹೆ ನೀಡಿದರು.

ಗದಗ-ಬೆಟಗೇರಿ ರೋಟರಿ ಕ್ಲಬ್‌ನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ನರೇಗಲ್ ಪಟ್ಟಣದ ಡಾ. ಆರ್. ಕೆ. ಗಚ್ಚಿನಮಠ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ, ಬಿಸಿಎಂ ಹಾಸ್ಟೆಲ್ ನಿಲಯ ಮೇಲ್ವಿಚಾರಕರಾದ ಪ್ರಭಾಕರ ಬಿ. ಚಲವಾದಿ, ಸಿಬ್ಬಂದಿಗಳಾದ ಮಂಜುಳಾ ಕತ್ತಿಶೆಟ್ಟರ, ಸುರೇಶ ಮಾದರ, ಸರೋಜಾ ಲಮಾಣಿ ಇದ್ದರು.

# ಮಕ್ಕಾ ಮದೀನ ಪುಣ್ಯ ಕ್ಷೇತ್ರಕ್ಕೆ ಪಾದಯಾತ್ರೆ ಯಶಸ್ವಿಗೊಳಿಸಿದ ಯಾತ್ರಿಕನಿಗೆ ಸನ್ಮಾನ




❑ ಸ್ನೇಹಜೀವಿ ನ್ಯೂಸ್

ಗದಗ, ಆ. 25 : ಮುಸ್ಲಿಂ ಸಮುದಾಯದ ಪವಿತ್ರ ಶ್ರದ್ಧಾಕೇಂದ್ರವಾಗಿರುವ ಮಕ್ಕಾ ಮದೀನ ಪುಣ್ಯ ಕ್ಷೇತ್ರಕ್ಕೆ ಗದಗ ಜಿಲ್ಲೆಯ ಶಿರಹಟ್ಟಿಯಿಂದ ಪಾದಯಾತ್ರೆ ಕೈಗೊಂಡ ಶಿರಹಟ್ಟಿ ಪಟ್ಟಣದ ನಿವಾಸಿ ಫಜಲ್‌ಶೇಖ್ ಅವರನ್ನು ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) ಬೆಂಗಳೂರು, ಗದಗ ಜಿಲ್ಲಾ ಘಟಕವು ಸನ್ಮಾನಿಸಿ ಗೌರವಿಸಿತು.

ಸುಮಾರು 10 ಸಾವಿರ ಕಿ.ಮೀ. ದೂರವನ್ನು 6 ತಿಂಗಳೊಳಗೆ ಪೂರ್ಣಗೊಳಿಸಿದ ಈ ಯಾತ್ರಿಕನಿಗೆ ರವಿವಾರ ಗದುಗಿನ ಕನಕ ಭವನದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) ಬೆಂಗಳೂರು, ಗದಗ ಜಿಲ್ಲಾ ಘಟಕವು ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ, ನಾಗರಿಕ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭದಲ್ಲಿ ಧರ್ಮ ಗುರುಗಳ ಹಾಗೂ ಗಣ್ಯಮಹನೀಯರ ಉಪಸ್ಥಿತಿಯಲ್ಲಿ ಸನ್ಮಾನಿಸಲಾಯಿತು. ಸಮಾರಂಭದಲ್ಲಿ ಸಂಘದ ರಾಜ್ಯ ಮತ್ತು ಗದಗ ಜಿಲ್ಲಾ ಘಟಕದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ನೇರ ಸಂದರ್ಶನ

❑ ಸ್ನೇಹಜೀವಿ ನ್ಯೂಸ್

ಗದಗ, ಆ. 25 : ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ (ಕಭೀ) ಕಾರ್ಯಕ್ರಮದಡಿಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಗುತ್ತಿಗೆ ಆಧಾರದ ಮೇಲೆ ನ್ಯೂರಾಲಾಜಿಸ್ಟ್ / ಫಿಜಿಷಿಯನ್ / ವೈದ್ಯಕೀಯ ಅಧಿಕಾರಿ-01 , ಫಿಜಿಯೋಥೆರಪೀಸ್ಟ್ -01 , ಸ್ಪೀಚ್ ಥೆರಪಿಸ್ಟ್-01, ಕ್ಲಿನಿಕಲ್ ಸೈಕಾಲಾಜಿಸ್ಟ್ -01 , ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ಭರ್ತಿ ಮಾಡಲು ಸೆಪ್ಟೆಂಬರ್ 1 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಕೊಠಡಿ ಸಂಖ್ಯೆ -101, ಜಿಲ್ಲಾಡಳಿತ ಭವನ ಗದಗ ದಲ್ಲಿ ನೇರ ಸಂದರ್ಶನ ಕರೆಯಲಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ https://gadag.nic.in ನಲ್ಲಿ ವೀಕ್ಷಿಸಬಹುದು ಎಂದು ಜಿಲ್ಲಾ ಕುಷ್ಠ ರೋಗ ನಿರ್ಮೂಲನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೋಗ ಕೋರ್ಸುಗಳಿಗೆ ಪ್ರವೇಶ ಅರ್ಜಿ ಆಹ್ವಾನ

❑ ಸ್ನೇಹಜೀವಿ ನ್ಯೂಸ್

ಗದಗ, ಆ. 25 : ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರ ಸಂ-ಯೋಜನೆಯಲ್ಲಿ ಬಸವ ಯೋಗ ಮಹಾವಿದ್ಯಾಲಯ ಗದಗ 2025-26 ನೇ ಸಾಲಿಗಾಗಿ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಜ್ ಮತ್ತು ಪಿ.ಜಿ. ಡಿಪ್ಲೋಮಾ ಇನ್ ಯೋಗ ಸ್ಟಡೀಜ್ ಕೋರ್ಸ್‌ಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಿದೆ.

ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಪಾಸಾಗಿರಬೇಕು. ಪಿ.ಜಿ. ಡಿಪ್ಲೋಮಾ ಇನ್ ಯೋಗ ಸ್ಟಡೀಜ್ ಕೋರ್ಸ್ ಪ್ರವೇಶ ಪಡೆಯಲು ವಿದ್ಯಾರ್ಹತೆ ಯಾವುದೇ ವಿಶ್ವವಿದ್ಯಾಲಯದಿಂದ ಡಿಗ್ರಿ ಪಡೆದಿರಬೇಕು. ಈ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ವಯೋಮಿತಿ ನಿರ್ಬಂಧವಿಲ್ಲ. ಕೋರ್ಸುಗಳ ಅವಧಿ 1 ವರ್ಷ (ಎರಡು ಸೆಮಿಸ್ಟರ್).

ಪ್ರವೇಶ ಬಯಸುವ ಅಭ್ಯರ್ಥಿಗಳು ಅರ್ಜಿ ಜೊತೆಗೆ ತಮ್ಮ ವಿದ್ಯಾರ್ಹತೆಯ ಮಾರ್ಕ್ಸ್ ಕಾರ್ಡ್, ಆಧಾರ ಕಾರ್ಡ್‌ಗಳ ಝೆರಾಕ್ಸ್ ಪ್ರತಿ ಲಗತ್ತಿಸಬೇಕು. ಪ್ರವೇಶ ಅರ್ಜಿ ಸಲ್ಲಿಸಿದವರು ಅಕ್ಟೋಬರ್ 1 ರಂದು ನಡೆಸುವ ಪ್ರವೇಶ ಪರೀಕ್ಷೆ ಗೆ ಹಾಜರಾಗಬೇಕು. ಮಾಹಿತಿಗಾಗಿ ಬಸವಯೋಗ ಮಹಾವಿದ್ಯಾಲಯ, ಗದಗ ದೂರವಾಣಿ ಸಂಖ್ಯೆ 9448317188, 7624822319 ಗೆ ಸಂಪರ್ಕಿಸಬಹುದು.

# ಕ್ರೀಡೆಗಳು ದೈಹಿಕ-ಮಾನಸಿಕ ಸಾಮರ್ಥ್ಯವನ್ನು ಹೆಚ್ಚಿಸುತ್ತವೆ




❑ ಸ್ನೇಹಜೀವಿ ನ್ಯೂಸ್

ಗದಗ, ಆ. 25 : ಕ್ರೀಡಾ ಚಟುವಟಿಕೆಗಳು, ಪ್ರತಿಯೊಬ್ಬ ವ್ಯಕ್ತಿಯ ದೈಹಿಕ ಮಾನಸಿಕ ಬೆಳವಣಿಗೆಗೆ ಸಹಾಯಕಾರಿಯಾಗುತ್ತದೆ. ಹೀಗಾಗಿ ಎಲ್ಲ ವಿದ್ಯಾರ್ಥಿಗಳು ಹಾಗೂ ಯುವಕರು ಕ್ರೀಡಾ ಚಟುವಟಿಕೆಯಲ್ಲಿ ಭಾಗವಹಿಸಲು ಆಸಕ್ತಿ ಬೆಳೆಸಿಕೊಳ್ಳಬೇಕೆಂದು ಪೊಲೀಸ್ ವರಿಷ್ಠಾಧಿಕಾರಿ ಜಗದೀಶ ರೋಹನ ಅವರು ಕರೆ ನೀಡಿದರು.

ಸಂಕನೂರ ಗ್ರುಪ್ ಆಫ್ ಇನ್‌ಸ್ಟಿಟ್ಯೂಷನ್ ಹಾಗೂ ಲಾನ್ ಟೆನ್ನಿಸ್ ಅಸೋಸಿಯೇಷನ್ ಇವುಗಳ ಸಂಯುಕ್ತ ಆಶ್ರಯದಲ್ಲಿ 79 ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಸಂಕನೂರ ನರ್ಸಿಂಗ್ ಇನ್‌ಸ್ಟಿಟ್ಯೂಟ್‌ದಲ್ಲಿ ಏರ್ಪಡಿಸಿದ ಟೆನ್ನಿಸ್ ಕ್ರೀಡಾಕೂಟದ ಉದ್ಘಾಟಕರಾಗಿ ಮಾತನಾಡಿದರು.

ಇನ್ನೋರ್ವ ಅತಿಥಿಗಳಾಗಿ ಭಾಗವಹಿಸಿದ ಎನ್.ಸಿ.ಸಿ. ಅಧಿಕಾರಿ ಭುವನ ಖರೆ ಮಾತನಾಡಿ ಸಂಕನೂರ ನರ್ಸಿಂಗ್ ಇನ್‌ಸ್ಟಿಟ್ಯೂಟ್‌ನವರು ಅತ್ಯುತ್ತಮವಾದ ಲಾನ್ ಟೆನ್ನಿಸ್ ಕ್ರೀಡಾಂಗಣ ನಿರ್ಮಿಸಿದ್ದು ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ಹೇಳಿದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಉಪಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್‌ಕುಮಾರ ಕೆಂಚಪ್ಪನವರು ಸಂದರ್ಭೋಚಿತವಾಗಿ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರದ ಅತ್ಯಂತ ಹಿರಿಯ ಲಾನ್ ಟೆನ್ನಿಸ್ ಕ್ರೀಡಾಪಟುಗಳಾದ ಡಾ. ಜೆ.ಸಿ. ಶಿರೋಳ, ಮತ್ತು ನಿವೃತ್ತ ಪ್ರಾಧ್ಯಾಪಕರು ಗಂಗಾಧರ ಥಡಿ ಅವರನ್ನು ಸನ್ಮಾನಿಸಲಾಯಿತು. ಈ ಕ್ರೀಡಾಕೂಟದಲ್ಲಿ ಒಟ್ಟು 40 ಕ್ರೀಡಾಪಟುಗಳು ಭಾಗವಹಿಸಿದ್ದರು. ಇದರಲ್ಲಿ ರಘು ಮೇರವಾಡೆ ಅವರ ತಂಡವು ಗೆಲವು ಸಾಧಿಸಿತು

ಅಧ್ಯಕ್ಷತೆಯನ್ನು ಡಾ. ಪ್ರಕಾಶ ಸಂಕನೂರ ವಹಿಸಿದ್ದರು. ಕಾರ್ಯಕ್ರಮದಲ್ಲಿ ಡಿ.ವೈ.ಎಸ್.ಪಿ. ವಿದ್ಯಾನಂದ ನಾಯಕ, ಡಾ. ಗುರುಪ್ರಸಾದ ಡಾ. ಶ್ರೀಧರ ಕುರಡಗಿ, ಡಾ. ಆದಿತ್ಯ ಗೋಡಖಿಂಡಿ, ಡಾ. ಸಿದ್ಧಾರ್ಥ, ಡಾ. ಹನಮಂತ ಮಾಲಿ, ಡಾ. ಶಶಾಂಕ ಶಿರೋಳ, ಡಾ. ರಾಹುಲ ಶಿರೋಳ, ಡಾ. ಇಂದುಶೇಖರ ಬಳ್ಳಾರಿ, ಡಾ. ವಿರೇಶ ವಿಜಾಪೂರ ಕ್ರೀಡಾ ತರಬೇತುದಾರರು ಶ್ರೀನಿವಾಸ ಬದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಉಪಪ್ರಾಚಾರ್ಯರು ವಿನ್ಸೆಂಟ್ ಪಾಟೀಲ ಸ್ವಾಗತಿಸಿದರು, ಡಾ. ಪವನ ಪಾಟೀಲ ವಂದಿಸಿದರು.

# ನಾಗಾವಿ ಗ್ರಾಮದ ಶ್ರೀ ಶರಣಬಸವೇಶ್ವರರ 44ನೇ ವರ್ಷದ ಪುರಾಣ-ಸನ್ಮಾನ



ನರೇಗಲ್ಲ ಸಮಿಪದ ಕೋಟುಮಚಗಿ ಗ್ರಾಮದ ಪ್ರಗತಿಪರ ರೈತ ಸಂಗಪ್ಪ ಗೋದಿ ಹಾಗೂ ಇತರೆ ದಾನಿಗಳನ್ನು ಶ್ರಾವಣ ಮಾಸದ ಅಂಗವಾಗಿ ಗದಗ ತಾಲೂಕು ನಾಗಾವಿ ಗ್ರಾಮದ ಶ್ರೀ ಶರಣಬಸವೇಶ್ವರರ 44ನೇ ವರ್ಷದ ಪುರಾಣದಲ್ಲಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ದೇವಸ್ಥಾನದ ಟ್ರಸ್ಟ ಕಮಿಟಿ ಸದಸ್ಯರು. ಪುರಾಣಿಕರು ಹಾಗೂ ಸಂಗೀತಗಾರರು ಉಪಸ್ಥಿತರಿದ್ದರು.

1 ನೇ ಪುಟದಿಂದ

## ಕರ್ನಾಟಕದಲ್ಲಿ ಪ್ರತಿ ವರ್ಷ 2,000ಕ್ಕೂ ಹೆಚ್ಚು ಮಕ್ಕಳು ನಾಪತ್ತೆ! ರಾಜ್ಯಪಾಲರ ಕಳವಳ

ಮಕ್ಕಳು ಎಂದಿಗೂ ಪತ್ತೆಯಾಗುವುದಿಲ್ಲ. ಅಂದರೆ, ಪ್ರತಿ ವರ್ಷ 200ಕ್ಕೂ ಹೆಚ್ಚು ಕುಟುಂಬಗಳು ತಮ್ಮ ಮಕ್ಕಳನ್ನು ಶಾಶ್ವತವಾಗಿ ಕಳೆದುಕೊಳ್ಳುತ್ತಿವೆ ಎಂದು ಹೇಳಿದರು.

ಹೆಚ್ಚಿನ ಮಕ್ಕಳು ತಮ್ಮ ದೈನಂದಿನ ಚಟುವಟಿಕೆಗಳ ಸಮಯದಲ್ಲಿ ಕಾಣೆಯಾಗುತ್ತಿದ್ದಾರೆ ಎಂದು ವರದಿಯಲ್ಲಿ ಬಹಿರಂಗಪಡಿಸಲಾಗಿದೆ. ಕೆಲವು ಮಕ್ಕಳು ಶಾಲೆಗೆ ಅಥವಾ ಟ್ಯೂಷನ್‌ಗೆ ಹೋಗುವಾಗ ಇದ್ದಕ್ಕಿದ್ದಂತೆ ಕಣ್ಮರೆಯಾಗಿದ್ದರೆ, ಕೆಲವರು ಆಟವಾಡುವಾಗ ಅಥವಾ ಮಾರುಕಟ್ಟೆಗೆ ಹೋಗುವಾಗ ಕಾಣೆಯಾಗಿದ್ದಾರೆ ಎಂದು ತಿಳಿಸಿದ್ದಾರೆ.


ಪೋಷಕರು ಮತ್ತು ಮಕ್ಕಳಲ್ಲಿ ಜಾಗೃತಿ ಮೂಡಿಸುವುದು, ಶಾಲಾ ಮಕ್ಕಳನ್ನು ರಕ್ಷಿಸುವುದು ಮತ್ತು ಅಪಹರಣ ಮತ್ತು ಶೋಷಣೆಯ ವಿರುದ್ಧ ಸಾಮೂಹಿಕ ಜಾಗರೂಕತೆಯನ್ನು ನಿರ್ಮಿಸುವ ಗುರಿ ಹೊಂದಿದೆ ಎಂದು ರಾಜ್ಯಪಾಲರು ತಿಳಿಸಿದರು.

ದೇಶದಲ್ಲಿ ಸುಮಾರು ಶೇ. 40 ರಷ್ಟು ಜನರು 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರು. ಇತ್ತೀಚಿನ ವರ್ಷಗಳಲ್ಲಿ ಮಕ್ಕಳ ಅಪಹರಣದ ಘಟನೆಗಳು ಹೆಚ್ಚಾಗಿವೆ. ಕರ್ನಾಟಕದಂತಹ ಅಭಿವೃದ್ಧಿ ಹೊಂದಿದ ಮತ್ತು ಪ್ರಗತಿಪರ ರಾಜ್ಯದಲ್ಲೂ ಮಕ್ಕಳ ಅಪಹರಣ ಘಟನೆಗಳು ಒಂದು ಸವಾಲಾಗಿ ಪರಿಣಮಿಸಿವೆ. ಕಾನೂನುಬದ್ಧ ಅಪರಾಧವಾಗಿರುವುದರ ಜೊತೆಗೆ, ಇದು ಗಂಭೀರ ಸಾಮಾಜಿಕ, ಮಾನಸಿಕ ಮತ್ತು ನೈತಿಕ ಬಿಕ್ಕಟ್ಟಾಗಿದೆ ಎಂದು ಹೇಳಿದರು.

ಇದನ್ನು ತಡೆಗಟ್ಟಲು ಪೋಷಕರು, ಶಾಲೆಗಳು, ಕಾಲೇಜುಗಳು, ನಾಗರಿಕರು, ಸಮಾಜ, ಸರ್ಕಾರೇತರ ಸಂಸ್ಥೆಗಳು, ಪೊಲೀಸರು, ಮಾನವ ಕಳ್ಳಸಾಗಣೆ ವಿರೋಧಿ ಘಟಕಗಳು ಮತ್ತು ಸ್ಥಳೀಯ ಸಂಸ್ಥೆಗಳು ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು.

ಸ್ನೇಹಜೀವಿ
ಉತ್ತರ ಕರ್ನಾಟಕದ ಧ್ವನಿಯಾಗಿ
ಕನ್ನಡ ದಿನಪತ್ರಿಕೆ
ಪತ್ರಿಕೆ ಬರುತ್ತಿಲ್ಲವೇ? ಪ್ರಿಯ ಓದುಗರೇ, ಸ್ನೇಹಜೀವಿ ದಿನಪತ್ರಿಕೆಯ ಚಂದಾದಾರರಾಗಲು ಅಥವಾ ಪತ್ರಿಕೆ ಸರಬರಾಜಿನಲ್ಲಿ ಸಮಸ್ಯೆ ಇದ್ದಲ್ಲಿ ಕೂಡಲೇ ಸಂಪರ್ಕಿಸಿರಿ. ಮೋ: 9482770999

## ಕಿಚ್ಚ ಸುದೀಪ ಹುಟ್ಟುಹಬ್ಬ: ಅಭಿಮಾನಿಗಳಿಗೆ ಸ್ಟಾರ್ ನಟನ ಸಂದೇಶ



**ಕಿಚ್ಚ ಸುದೀಪ ಹುಟ್ಟುಹಬ್ಬ ಸೆಪ್ಟೆಂಬರ್ 2ರಂದು ಇದೆ. ಇದನ್ನು ಆಚ-ರಣೆ ಮಾಡಲು ಈಗಾಗಲೇ ಅಭಿಮಾನಿಗಳು ತಯಾರಿ ನಡೆಸಿದ್ದಾರೆ. ಸೋಮವಾರ ಸ್ಟಾರ್ ನಟ ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಂದೇಶವನ್ನು ಹಾಕಿದ್ದಾರೆ, ಅಭಿಮಾನಿಗಳಿಗೆ ವಿಶೇಷ ಮನವಿ ಮಾಡಿದ್ದಾರೆ.**

ಪ್ರಿಯ ಸ್ನೇಹಿತರೇ..

❑ ಸ್ನೇಹಜೀವಿ ನ್ಯೂಸ್

ಸೆಪ್ಟೆಂಬರ್ ಎರಡರ ಬೆಳಗಿನಲ್ಲಿ ಅಲ್ಲ ಸೆಪ್ಟೆಂಬರ್ ಒಂದರ ರಾತ್ರಿಯೇ ಸಿಗೋಣವಾ !

ಸೆಪ್ಟೆಂಬರ್ ಎರಡರಂದು ನೀವು ನನ್ನನ್ನು ಭೇಟಿಮಾಡುವುದಕ್ಕಾಗಿ ಎಷ್ಟು ಕಾಯುವಿರೋ ಅದಕ್ಕಿಂತ ಹೆಚ್ಚಾಗಿ ನಾನು ನಿಮಗಾಗಿ ಕಾಯುತ್ತೇನೆ. ಆ ದಿನ ನೀವು ಪಡುವ ಸಂಭ್ರಮ, ಆಚರಿಸುವ ವಿಡಿಯೋಗಳನ್ನು ನೋಡಿದಾಗ ಪ್ರತಿಸಲವೂ ನನಗೆ ಮರುಹುಟ್ಟು ಪಡೆದಂತಾಗುತ್ತದೆ.

ನಿಸ್ಸಂದೇಹವಾಗಿ ನನ್ನ ಬದುಕಿಗೆ ಮೌಲ್ಯ ತುಂಬಿದವರು ನೀವು. ನಿಮ್ಮೆದರು ನಿಂತು ವಿನೀತನಾಗುವುದಕ್ಕಿಂತ ಖುಷಿ ಏನಿದೆ? ಆದ್ದರಿಂದಲೇ ದಶಕಗಳಿಂದ ನಿಮ್ಮನ್ನು ಮನೆಯ ಹತ್ತಿರ ಭೇಟಿಮಾಡುತ್ತಲೇ ನಾನೂ ಸಂಭ್ರಮಸಿದ್ದೇನೆ. ಆದರೆ ಈ ಸಲ ತುಂಬಾ ಕಷ್ಟವಾಗುತ್ತಿದೆ ಏಕೆಂದರೆ ಅಮ್ಮನಿಲ್ಲದ ಮೊದಲ ವರ್ಷವಿದು. ಅಮ್ಮನಿಲ್ಲದ ಸಂಭ್ರಮವನ್ನು ಊಹಿಸಿಕೊಳ್ಳುವುದೂ ನನಗೆ ಕಷ್ಟವಾಗುತ್ತಿದೆ.

ಆದರೆ ನಿಮ್ಮನ್ನು ನಿರಾಸೆಗೊಳಿಸುವುದು ನನಗಿಷ್ಟವಿಲ್ಲ! ನಿಮ್ಮ ಮೂಲಕವೇ ನನ್ನ ಹುಟ್ಟಬ ಹುಟ್ಟಬೇಕು!. ಗಡಿಯಾರ ಹನ್ನೆರಡು ಗಂಟೆ ಎಂದು ಸದ್ದುಮಾಡುವಾಗ ನನಗೆ ನಿಮ್ಮ ಶುಭಾಶಯಗಳೇ ಕಿವಿಗೆ ಕೇಳಬೇಕು. ಅವುಗಳೇ ಎದೆಗೆ ಇಳಿಯಬೇಕು. ಆದ್ದರಿಂದ ಸೆಪ್ಟೆಂಬರ್ ಒಂದರ ರಾತ್ರಿ ನಾವೆಲ್ಲರೂ ಒಂದು ಕಡೆ ಸೇರೋಣ. ಎಲ್ಲಿ, ಹೇಗೆ? ಅನ್ನೋದನ್ನು ತಿಳಿಸುತ್ತೇನೆ.

ಆದರೆ ಮಾರನೇ ದಿನ ಅಂದರೆ ಸೆಪ್ಟೆಂಬರ್ 2 ರಂದು ದಯವಿಟ್ಟು ಯಾರೂ ಮನೆ ಹತ್ತಿರ ಬರಬೇಡಿ. ನಾನು ಆ ದಿನ ಮನೆಯಲ್ಲಿ ಇರುವುದಿಲ್ಲ. ನಾನಿರುವುದಿಲ್ಲವೆಂದು ಹೇಳಿದ ಮೇಲೂ ನೀವು ಮನೆ ಬಳಿ ಬಂದು ಕಾದರೆ ನನ್ನ ಮನಸಿಗೆ ನೋವಾಗುತ್ತದೆ. ಜೊತೆಗೆ ಈ ಸಲ ಅಮ್ಮನಿಲ್ಲದ ಮೊದಲ ವರ್ಷವಾಗಿರುವುದರಿಂದ ಮನೆ ಬಳಿ ಚೂರು ಶಾಂತಿ ವಾತಾವರಣ ಇರಲೆಂದು ಬಯಸುತ್ತಿದ್ದೇನೆ.

ನನಗೆ ನಂಬಿಕೆ ಇದೆ; ನೀವು ನನ್ನನ್ನು ಅರ್ಥಮಾಡಿಕೊಳ್ಳುವಿರೆಂದು ಮತ್ತು ನಿರಾಸೆಗೊಳಿಸುವುದಿಲ್ಲವೆಂದು. ಅದು ಬಿಟ್ಟರೆ ಪ್ರತಿವರ್ಷದಂತೆ ಈ ವರ್ಷವೂ ಸಾಮಾಜಿ-ಕ ಸೇವಾ ಕಾರ್ಯಗಳು ಯಥಾಪ್ರಕಾರ ನಡೆಯಲಿವೆ. ನಿಮ್ಮ ಹಾರೈಕೆ, ಅಭಿಮಾನ ಮತ್ತು ಸಾಂಗತ್ಯವೇ ನನ್ನ ಬಹುದೊಡ್ಡ ಆಸ್ತಿ.

ಸದಾ ಪ್ರೀತಿ ಇರಲಿ. ನಿಮ್ಮ

**ಕಿಚ್ಚ**

## ಗಣೇಶ ಹಬ್ಬ 2025: ಮನೆ,ಪೆಂಡಾಲ್‌ಗಳಿಗೆ ಮಾಡಬಹುದಾದ ಸರಳ ಅಲಂಕಾರ!



❑ ಸ್ನೇಹಜೀವಿ ನ್ಯೂಸ್

2025ರ ಗಣೇಶ ಹಬ್ಬವನ್ನು ಮನೆ ಮತ್ತು ಪೆಂಡಾಲ್‌ಗಳಿಗೆ ಭವ್ಯವಾದ ಅಲಂಕಾರಗಳೊಂದಿಗೆ ಆಚರಿಸಿ, ಸಂಪ್ರದಾಯ, ಸೃಜನಶೀಲತೆ ಮತ್ತು ಪರಿಸರ ಸ್ನೇಹಿ ಅಭ್ಯಾಸಗಳನ್ನು ಮಿಶ್ರಣ ಮಾಡಿ ಗಣೇಶನನ್ನು ಭಕ್ತಿ ಮತ್ತು ಶೈಲಿಯಿಂದ ಸ್ವಾಗತಿಸಿ.

ಗಣೇಶ ಚತುರ್ಥಿ ಭಾರತದ ಅತ್ಯಂತ ಪ್ರೀತಿಯ ಹಬ್ಬಗಳಲ್ಲಿ ಒಂದಾಗಿದೆ. ವಿಘ್ನ ನಿವಾರಕ ಮತ್ತು ಬುದ್ಧಿವಂತಿಕೆಯ ದೇವರಾದ ಗಣೇಶನ ಜನ್ಮವನ್ನು ಆಚರಿಸುತ್ತದೆ. ಇದು ಕೇವಲ ಧಾರ್ಮಿಕ ಸಂದರ್ಭವಲ್ಲ, ಆದರೆ ಭಕ್ತಿ, ಸೃಜನಶೀಲತೆ ಮತ್ತು ಸಮುದಾಯ ಭಾವನೆಯಿಂದ ಗುರುತಿಸಲ್ಪಟ್ಟ ಸಾಂಸ್ಕೃತಿಕ ಸಂಭ್ರಮ ಕೂಡ ಆಗಿದೆ. ಆಚರಣೆಯ ಒಂದು ಮಹತ್ವದ ಭಾಗವೆಂದರೆ ಮನೆಗಳು ಮತ್ತು ಪೆಂಡಾಲ್‌ಗಳನ್ನು (ಸಾರ್ವಜನಿಕ ಸ್ಥಾಪನೆಗಳು) ಬಪ್ಪನನ್ನು ಸ್ವಾಗತಿಸಲು ಎಷ್ಟು ಸುಂದರವಾಗಿ ಅಲಂಕರಿಸಲಾಗಿದೆ. ಸಾಂಪ್ರದಾಯಿಕದಿಂದ ಆಧುನಿಕ, ಪರಿಸರ ಸ್ನೇಹಿಯಿಂದ ಭವ್ಯವಾದವರೆಗೆ, ಅಲಂಕಾರ ಪ್ರವೃತ್ತಿಗಳು ಪ್ರತಿ ವರ್ಷವೂ ವಿಕಸನಗೊಳ್ಳುತ್ತವೆ ಆದರೆ ಅವುಗಳ ಭಕ್ತಿಯ ಸಾರವನ್ನು ಉಳಿಸಿಕೊಳ್ಳುತ್ತವೆ. 2025ಕ್ಕೆ, ನೀವು ಪ್ರಯತ್ನಿಸಬಹುದಾದ ಐದು ಅಲಂಕಾರ ಕಲ್ಪನೆಗಳು ಇಲ್ಲಿವೆ, ಪ್ರತಿಯೊಂದೂ ಭಕ್ತಿಯನ್ನು ಸೃಜನಶೀಲತೆಯೊಂದಿಗೆ ಮಿಶ್ರಣ ಮಾಡುತ್ತದೆ.

### ಪರಿಸರ ಸ್ನೇಹಿ ಹೂವಿನ ಥೀಮ್

ಪರಿಸರ-ಪ್ರಜ್ಞೆಯ ಅಲಂಕಾರಗಳು ಇನ್ನು ಮುಂದೆ ಕೇವಲ ಒಂದು ಪ್ರವೃತ್ತಿಯಲ್ಲ-ಅವು ಒಂದು ಅವಶ್ಯಕತೆಯಾಗಿದೆ. ಗಣೇಶ ಚತುರ್ಥಿ 2025 ಕ್ಕೆ, ಪರಿಸರ ಸ್ನೇಹಿ ಹೂವಿನ ಥೀಮ್ ಅನ್ನು ಅಳವಡಿಸಿಕೊಳ್ಳುವುದು ಸುಂದರ ಮತ್ತು ಸುಸ್ಥಿರವಾಗಿದೆ. ಪ್ಲಾಸ್ಟಿಕ್ ಹೂವುಗಳು ಅಥವಾ ಜೈವಿಕ ವಿಘಟನೀಯವಲ್ಲದ ವಸ್ತುಗಳನ್ನು ಅವಲಂಬಿಸುವ ಬದಲು, ಸುಗಂಧಭರಿತ ಮತ್ತು ರೋಮಾಂಚಕ ಮಂಟಪವನ್ನು ರಚಿಸಲು ಗುಲಾಬಿ, ಮಲ್ಲಿಗೆ, ಕಮಲ ಮತ್ತು ಗುಲಾಬಿಗಳಂತಹ ತಾಜಾ ಹೂವುಗಳನ್ನು ಬಳಸುವುದನ್ನು ಪರಿಗಣಿಸಿ. ಹೂಮಾಲೆಗಳು ವಿಗ್ರಹವನ್ನು ಅಲಂಕರಿಸಬಹುದು, ಅದರ ದಳಗಳನ್ನು ರಂಗೋಲಿ ಶೈಲಿಯ ಮಾದ-ರಿಗಳಲ್ಲಿ ನೆಲದ ಮೇಲೆ ಹರಡಬಹುದು. ಬಾಳೆ ಎಲೆಗಳು, ತೆಂಗಿನ ಎಲೆಗಳು ಮತ್ತು ಬಿದಿರಿನ ಕೋಲುಗಳನ್ನು ನೈಸರ್ಗಿಕ ಹಿನ್ನೆಲೆಯನ್ನು ನಿರ್ಮಿಸಲು ಬಳಸಬಹುದು, ಇದು ಮಣ್ಣಿನ ಭಾವನೆಯನ್ನು ಸೃಷ್ಟಿಸುತ್ತದೆ.

ಹೂವುಗಳ ತಾಜಾತನವು ಪರಿಶುದ್ಧತೆ ಸಂಕೇತಿಸುತ್ತದೆ, ಇದು ಗಣೇಶನ ಆದ-್ಯಾತ್ಮಿಕ ಮಹತ್ವದೊಂದಿಗೆ ಸಂಪೂರ್ಣವಾಗಿ ಪ್ರತಿಧ್ವನಿಸುತ್ತದೆ. ಹೂವಿನ ವ್ಯವಸ್ಥೆಗಳಲ್ಲಿ ಸಾಂಪ್ರದಾಯಿಕ ದೀಪಗಳನ್ನು (ಎಣ್ಣೆ ದೀಪಗಳು) ಸೇರಿಸುವುದರಿಂದ ಮೋಡಿ ಹೆಚ್ಚಾಗುತ್ತದೆ ಮತ್ತು ದೈವಿಕ ಆಶೀರ್ವಾದಗಳನ್ನು ಆಹ್ವಾನಿಸುತ್ತದೆ. ಇಡೀ ಅವಧಿಗೆ ತಾಜಾ ಹೂವುಗಳು ಕಾರ್ಯಸಾಧ್ಯವಾಗದಿದ್ದರೆ, ಮನೆಯಲ್ಲಿ ತಯಾರಿಸಿದ ಕಾಗದ ಅಥವಾ ಬಟ್ಟೆಯ ಹೂವುಗಳು ಸುಸ್ಥಿರ ಪರ್ಯಾಯಗಳಾಗಿ ಕಾರ್ಯನಿರ್ವಹಿಸುತ್ತವೆ. ಅಂತಹ ಸೆಟಪ್ ತ್ಯಾಜ್ಯವನ್ನು ಕಡಿಮೆ ಮಾಡುವುದಲ್ಲದೆ, ಹಬ್ಬದ ಪರಿಸರ-ಸೂಕ್ಷ್ಮ ಮೌಲ್ಯಗಳನ್ನು ಕಾಪಾಡಿಕೊಳ್ಳುತ್ತದೆ. ಈ ಥೀಮ್ ಅನ್ನು ಅಳವಡಿಸಿಕೊಳ್ಳುವ ಕುಟುಂಬಗಳು ಮತ್ತು ಪೆಂಡಾಲ್‌ಗಳು ಪರಿಸರ ಜವಾಬ್ದಾರಿಯ ಬಗ್ಗೆ ಜಾಗೃತಿ ಮೂಡಿಸಲು ಕೊಡುಗೆ ನೀಡುತ್ತವೆ, ಇದು ಗಣೇಶ ಚತುರ್ಥಿ ಆಚರಣೆಗಳನ್ನು ಹೆಚ್ಚು ಅರ್ಥಪೂರ್ಣವಾಗಿಸುತ್ತದೆ.

### ಸಾಂಪ್ರದಾಯಿಕ ಮಂಟಪ ಶೈಲಿ

ಸಾಂಪ್ರದಾಯಿಕ ಮಹಾರಾಷ್ಟ್ರ ಮಂಟಪವು ಕೆಂಪು, ಹಳದಿ ಮತ್ತು ಕಿತ್ತಳೆ ಬಣ್ಣಗಳಲ್ಲಿ ಪ್ರಕಾಶಮಾನವಾದ ಬಟ್ಟೆಯ ಡ್ರೇಪ್‌ಗಳೊಂದಿಗೆ ಅಲಂಕೃತ ಹಿನ್ನೆಲೆಗಳನ್ನು ಒಳಗೊಂಡಿರುತ್ತದೆ-ಗಣೇಶನಿಗೆ ಶುಭವೆಂದು ಪರಿಗಣಿಸಲಾದ ಬಣ್ಣಗಳು. ಮಾವಿನ ಎಲೆಗಳು ಮತ್ತು ಗುಲಾಬಿ ಹೂಮಾಲೆಗಳಿಂದ ಮಾಡಿದ ಅಲಂಕಾರಿಕ ತೋರಣಗಳನ್ನು ಮಂಟಪದ ಪ್ರವೇಶದ್ವಾರದಲ್ಲಿ ಇರಿಸಬಹುದು, ಇದು ಸಮೃದ್ಧಿ ಮತ್ತು ಸಕಾರಾತ್ಮಕತೆಯನ್ನು ಸಂಕೇತಿಸುತ್ತದೆ.

ಒಳಗೆ, ವಿಗ್ರಹವನ್ನು ಜರಿ ಗಡಿಗಳನ್ನು ಹೊಂದಿರುವ ರೇಷ್ಮೆ ಅಥವಾ ಹತ್ತಿ ಬಟ್ಟೆಯಲ್ಲಿ ಮುಚ್ಚಿದ ಎತ್ತರದ ವೇದಿಕೆಯಲ್ಲಿ ಇರಿಸಬಹುದು. ಸಾಂಪ್ರದಾಯಿಕ ಮಹಾರಾಷ್ಟ್ರದ ಮನೆಯ ವ್ಯವಸ್ಥೆಯನ್ನು ಪುನರಾವರ್ತಿಸಲು ಹಿತ್ತಾಳೆ ದೀಪಗಳು (ಸಮೈಸ್) ಮತ್ತು ನೀರು ಮತ್ತು ವೀಳ್ಯದೆಲೆಗಳಿಂದ ತುಂಬಿದ ತಾಮ್ರದ ಪಾತ್ರೆಗಳನ್ನು ವಿಗ್ರಹದ ಸುತ್ತಲೂ ಜೋಡಿಸಬಹುದು. ಹೆಚ್ಚು ಸಾಂಸ್ಕೃತಿಕ ಸ್ಪರ್ಶಕ್ಕಾಗಿ, ನೀವು ಪಲ್ಲಕ್ಕಿ, ಡೋಲ್-ತಾಶಾ ಅಥವಾ ಮಹಾರಾಷ್ಟ್ರದ ಹಬ್ಬದ ಉತ್ಸಾಹವನ್ನು ಜೀವಂತಗೊಳಿಸುವ ಗ್ರಾಮೀಣ ಹಳ್ಳಿಯ ದೃಶ್ಯಗಳ ಚಿಕಣಿ ಪ್ರತಿಮೆಗಳನ್ನು ಸಹ ಸೇರಿಸಿಕೊಳ್ಳಬಹುದು.

**ಪೆಂಡಾಲ್‌ಗಳಿಗೆ, ಕುಶಲಕರ್ಮಿಗಳು ರಾಯ್ಗಡ್ ಅಥವಾ ಶನಿವಾರ ವಾಡಾದಂತಹ ಕೋಟೆಗಳಿಂದ ಸ್ಫೂರ್ತಿ ಪಡೆದ ಬೃಹತ್ ರಚನೆಗಳನ್ನು ವಿನ್ಯಾಸಗೊಳಿಸಬಹುದು, ಇದು ಮರಾಠ ಹೆಮ್ಮೆಯ ಸ್ಪರ್ಶವನ್ನು ಸೇ-ರಿಸುತ್ತದೆ. ಈ ಅಲಂಕಾರ ಶೈಲಿಯು ಭವ್ಯವಾಗಿ ಕಾಣುವುದಲ್ಲದೆ, ಯುವ ಪೀಳಿಗೆಗೆ ರಾಜ್ಯದ ಆಳವಾದ ಬೇರೂರಿರುವ ಸಂಪ್ರದಾಯಗಳ ಬಗ್ಗೆ ಶಿಕ್ಷಣ ನೀಡುತ್ತದೆ. 2025ರಲ್ಲಿ, ಈ ಸಾಂಸ್ಕೃತಿಕ ಅಂಶಗಳನ್ನು ಪುನರುಜ್ಜೀವನಗೊಳಿಸುವುದು ಮತ್ತು ಸಂರಕ್ಷಿಸುವುದು ನಿಮ್ಮ ಗಣೇಶ ಮಂಟಪಕ್ಕೆ ಆಧ್ಯಾತ್ಮಿಕ ಮಹತ್ವ ಮತ್ತು ಸೌಂದರ್ಯವನ್ನು ನೀಡುತ್ತದೆ.**

## 300 ಲೀ. ಎದೆಹಾಲು ದಾನ ಮಾಡಿ ಸಾವಿರಾರು ಶಿಶುಗಳಿಗೆ ಜೀವ ಕೊಟ್ಟ ಮಹಾ ತಾಯಿ









**300 ಲೀ. ಎದೆಹಾಲು ದಾನ ಮಾಡಿ ಸಾವಿರಾರು ಶಿಶುಗಳಿಗೆ ಜೀವ ಕೊಟ್ಟ ಮಹಾ ತಾಯಿ; ಏಷ್ಯಾ, ಇಂಡಿಯಾ ಬುಕ್ ಆಫ್ ರೆಕಾರ್ಡ್ ಗಿಟ್ಟಿಸಿಕೊಂಡ 'ತಮಿಳುನಾಡಿನ ಅಮ್ಮ'!**

ತಮಿಳುನಾಡಿನ ಸೆಲ್ವಾ ಬೃಂದಾ ಎಂಬ ಮಹಿಳೆ ಎರಡು ವರ್ಷಗಳಲ್ಲಿ 300 ಲೀಟರ್‌ಗೂ ಹೆಚ್ಚು ಎದೆಹಾಲನ್ನು ದಾನ ಮಾಡಿದ್ದಾರೆ. ಇದನ್ನು ಗುರುತಿಸಿ, ಏಷ್ಯಾ ಮತ್ತು ಇಂಡಿ-ಯಾ ಬುಕ್ ಆಫ್ ರೆಕಾರ್ಡ್ಸ್ ನೀಡಲಾಗಿದೆ. ಎರಡು ಮಕ್ಕಳ ತಾಯಿ ಸೆಲ್ವಾ, ಆಸ್ಪತ್ರೆಯ ಎದೆ ಹಾಲಿನ ಬ್ಯಾಂಕ್‌ಗೆ ಅಪಾರ ಕೊಡುಗೆ ನೀಡಿದ್ದಾರೆ. ಎಲ್ಲ ತಾಯಂದಿರು ಮಕ್ಕಳ ಉಳಿವಿಗಾಗಿ ಎದೆ ಹಾಲು ದಾನ ಮಾಡಿ ಎಂದು ಪ್ರೇರೇಪಿದ್ದಾರೆ.

**300 ಲೀಟರ್ ಎದೆಹಾಲು ದಾನ ಮಾಡಿದ ತಮಿಳುನಾಡಿನ ಮಹಿಳೆ**

**2003ರ ಏಪ್ರಿಲ್‌ನಿಂದ 2025ರ ಫೆಬ್ರವರಿವರೆಗೆ 22 ತಿಂಗಳ ಅವಧಿಯ ದಾನ ಐತಿಹಾಸಿಕ ದಾಖಲೆ ಬರೆದ ತಮಿಳುನಾಡಿನ ಮಹಿಳೆ**

❑ ಸ್ನೇಹಜೀವಿ ನ್ಯೂಸ್

ಚೆನ್ನೈ : ಅಮ್ಮನ ಎದೆಹಾಲು ಅಮೃತಕ್ಕೆ ಸಮಾನ.. ಪ್ರತಿ ನವಜಾತ ಶಿಶು ಹುಟ್ಟಿದ ಆರು ತಿಂಗಳು ಎದೆಹಾಲು ಅವಶ್ಯಕ.. ಅಮ್ಮನ ಎದೆಹಾಲಿನಲ್ಲಿ ಮಗುವಿನ ಆರೋಗ್ಯಕರ ಬೆಳವಣಿಗೆ, ದೈಹಿಕ ಬೆಳವಣಿಗೆಗೆ ಬೇಕಾದ ಪೋಷಕಾಂಶ ಇರುತ್ತದೆ. ಬರೀ ಮಕ್ಕಳು ಮಾತ್ರವಲ್ಲ ತಾಯಿಯರನ್ನೂ ಇದು ಸದೃಡಗೊಳಿಸುತ್ತದೆ.

ಅಮ್ಮ-ಮಕ್ಕಳ ಬಾಂಧವ್ಯಕ್ಕೆ ಮುನ್ನುಡಿ ಬರೆಯುತ್ತದೆ. ಆದ್ರೆ ಅದೆಷ್ಟೋ ಮಕ್ಕಳಿಗೆ ಅಮ್ಮನ ಎದೆಹಾಲು ಕುಡಿಯುವ ಸೌಭಾಗ್ಯ ಇರೋದಿಲ್ಲ. ಅಕಾಲಿಕ ಸಾವು , ಕುಂಠಿತ ಬೆಳವಣಿಗೆ ಆಗಿಯೂ ಇರೋದಿದೆ. ಆದ್ರೆ ಇಲ್ಲೊಬ್ಬ ತಾಯಿ ಎರಡು ವರ್ಷದಿಂದ ಎದೆಹಾಲು ದಾನ ಮಾಡಿ ಸಾವಿರಾರು ಶಿಶುಗಳಿಗೆ ನೆರವಾಗಿದ್ದಾರೆ. ಇಷ್ಟು ಮಾತ್ರವಲ್ಲದೇ ವಿಶ್ವ ದಾಖಲೆ ಗಿಟ್ಟಿಸಿಕೊಂಡಿದ್ದಾರೆ.

ಹೌದು ತಮಿಳುನಾಡಿನ 33 ವರ್ಷದ ಮಹಿಳೆ ಅಂದಾಜು 300 ಲೀಟರ್ ಎದೆಹಾಲನ್ನು ದಾನ ಮಾಡುವ ಮೂಲಕ 'ಏಷ್ಯಾ ಬುಕ್ ಆಫ್ ರೆಕಾರ್ಡ್' ಮತ್ತು 'ಇಂಡಿಯಾ ಬುಕ್ ಆಫ್ ರೆಕಾರ್ಡ್' ಎರಡರಲ್ಲೂ ಸ್ಥಾನ ಪಡೆದಿದ್ದಾರೆ.ಬೃಂದಾ ಅವರ ನಿಸ್ವಾರ್ಥ ಸೇವೆಯನ್ನು ಗುರುತಿಸಿ ಗುರುವಾರ (ಆ.7) ನಡೆಯಲಿರುವ 'ವಿಶ್ವ ಸ್ತನ್ಯಪಾನ ಸಪ್ತಾಹ'ದ ಸಮಾರೋಪ ಸಮಾರಂಭದಲ್ಲಿಅವರನ್ನು ಸನ್ಮಾನಿಸಲಾಗುತ್ತದೆ.

## ವಿಜಯಪುರ ನ್ಯಾಯಾಧೀಶರ ಮನೆಯಲ್ಲೇ ಕಳ್ಳತನ





**ವಿಜಯಪುರ, ಆಗಸ್ಟ್ 25: ವಿಜಯಪುರ ಸೆಷನ್ಸ್ ಕೋರ್ಟ್ ನ್ಯಾಯಾಧೀಶ ಸಚಿನ್ ಅವರ ಮನೆಯಲ್ಲಿ ಕಳ್ಳತನವಾಗಿದೆ. ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ಪಟ್ಟಣದ ಹುಡ್ಕೋ ಕಾಲೋನಿಯಲ್ಲಿ ನ್ಯಾ.ಸಚಿನ್ ಕೌಶಿಕ್ ಅವರು ಬಾಡಿಗೆ ಮನೆಯಲ್ಲಿ ವಾಸವಾಗಿದ್ದಾರೆ.**

ನ್ಯಾಯಾಧೀಶ ಸಚಿನ್ ಕೌಶಿಕ್ ಅವರು ಊರಿಗೆ ತೆರಳಿದ್ದಾಗ ಕಳ್ಳತನವಾಗಿದೆ. ಸ್ಥಳಕ್ಕೆ ಹೆಚ್ಚುವರಿ ಎಸ್‌ಪಿ ರಾಮನಗೌಡ ಹಟ್ಟಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮುದ್ದೇಬಿಹಾಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

ಮಾರ್ಗ ಮಧ್ಯೆ ಕಾರು ನಿಲ್ಲಿಸಿ, ಮೂತ್ರ ವಿಸರ್ಜನೆಗೆ ಹೋಗಿದ್ದರು. ಈ ವೇಳೆ ಆರೋಪಿಗಳು ಕಾರಿನ ಗಾಜು ಒಡೆದು 15 ಲಕ್ಷ ನಗದು ಕದಿಯಲು ಮುಂದಾದರು. ಗ್ಲಾಸ್ ಒಡೆದ ಶಬ್ದ ಕೇಳಿ ಓಡಿ ಬಂದ ಲಿಂಗರಾಜು ಅವರಿಗೆ ಬಿಯರ್ ಬಾಟಲ್‌ನಿಂದ ಹೊಡೆದು ಹಲ್ಲೆ ಮಾಡಿದ್ದಾರೆ. ಬಳಿಕ, ಕಾರಿನಲ್ಲಿದ್ದ 15 ಲಕ್ಷ ರೂ. ದೋಚಿಕೊಂಡು ಪರಾರಿಯಾಗಿದ್ದಾರೆ. ಗಾಯಗೊಂಡಿರುವ ಲಿಂಗರಾಜು ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಶ್ರೀನಿವಾಸಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಸ್ಥಳಕ್ಕೆ ಕೋಲಾರ ಎಸ್‌ಪಿ ನಿಖಿಲ್ ಹಾಗೂ ಬೆರಳಚ್ಚು ತಜ್ಞರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.





❑ ಸ್ನೇಹಜೀವಿ ನ್ಯೂಸ್ ಗದಗ: ಗೌರಿ ಹಬ್ಬ, ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಹೂವು ಹಾಗೂ ಹಣ್ಣುಗಳ ಬೆಲೆ ಗಗನಕ್ಕೇ-ರಿದ್ದು, ಹಬ್ಬಕ್ಕಾಗಿ ಪೂಜಾ ಸಾಮಗ್ರಿ, ಹೂ-ಹಣ್ಣುಗಳ ಖರೀದಿಗೆ ಭಾನುವಾರ ಜನ ಮುಗಿ ಬಿದ್ದಿದ್ದರು.

ಮಂಗಳವಾರದ ಗೌರಿ ಹಬ್ಬ, ಬುಧವಾರದ ಗಣೇಶ ಚತುರ್ಥಿ ಹಬ್ಬಗಳ ಪ್ರಯುಕ್ತ ನಗರದಲ್ಲೆಡೆ ಖರೀದೀ ಭರಾಟೆ ಜೋರಾಗಿದೆ. ಹಬ್ಬದ ಹಿನ್ನೆಲೆಯಲ್ಲಿ ನಗರದ ಮಾರುಕಟ್ಟೆ, ಗದಗಅವೆನ್ಯೂ ರಸ್ತೆಗಳಲ್ಲಿ ಖರೀದಿಗಾಗಿ ಜನರು ಮುಗಿಬಿದ್ದಿದ್ದರು. ಜೊತೆಗೆ ಮಾರುಕಟ್ಟೆಗಳಲ್ಲೂ ವ್ಯಾಪಾರ ಜೋರಾಗಿತ್ತು,

ಹಬ್ಬದ ದಿನ ಹೂ-ಹಣ್ಣುಗಳ ದರ ಮತ್ತಷ್ಟು ಏರಿಕೆ ಆಗುವುದರಿಂದ ಹಾಗೂ ಇತರೆ ಕಾರ್ಯಗಳ ಹಿನ್ನೆಲೆಯಲ್ಲಿ ಮಾರುಕಟ್ಟೆಗೆ ದಾಂಗುಡಿ ಇಟ್ಟಿದ್ದರು. ಇಡೀ ದಿನ ಕಿಕ್ಕಿರಿದು ಜನ ತುಂಬಿದ್ದರು.ಈ ನಡುವೆ ಬೇಡಿಕೆ ಹೆಚ್ಚಾದಂತೆ ಹೂವು ಹಾಗೂ ಹಣ್ಣುಗಳ ಬೆಲೆ ಕೂಡ ಏರಿಕೆಯಾಗಿದೆ. ಭಾನುವಾರ ಪ್ರತಿ ಕೆಜಿ ಮಲ್ಲಿಗೆ 3,800 ರೂ. ಮತ್ತು ಕೇವಲ 10 ಗ್ರಾಂಗೆ 40 ರೂ. ಮಾರಾಟ ಮಾಡಲಾಗಿದೆ. ಮಾರುಕಟ್ಟೆ ಸೇರಿದಂತೆ ಸಗಟು ಮಾರುಕಟ್ಟೆಗಳಲ್ಲಿ ಪ್ರತಿ ಕೆಜಿಗೆ 120-150 ರೂ.ಗೆ ಮಾರಾಟವಾಗುತ್ತಿದ್ದ ಗುಲಾಬಿಗಳು ಬಸವನಗುಡಿ ಮತ್ತು ಜಯನಗರದಾದ್ಯಂತದ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಪ್ರತಿ ಕೆಜಿಗೆ 400 ರೂ. ವರೆಗೆ ಮಾರಾಟವಾಗುತ್ತಿದ್ದವು.

ವರಮಹಾಲಕ್ಷ್ಮಿ ಅಥವಾ ದಸರಾಕ್ಕೆ ಹೋಲಿಸಿದರೆ ಈ ಬೆಲೆಗಳು ಕಡಿಮೆಯಾಗಿದೆ. ಆದರೆ, ಗ್ರಾಹಕರಿಗೆ ಈ ಬೆಲೆ ಹೆಚ್ಚು

## ಲಾಡ್ಜ್‌ನಲ್ಲಿ ಗೃಹಿಣಿ ಬರ್ಬರ ಹತ್ಯೆ; ಬಾಯಿಗೆ 'ಜಿಲೆಟಿನ್ ಕಡ್ಡಿ' ಇಟ್ಟು ಸ್ಫೋಟಿಸಿದ್ನಾ ಪ್ರಿಯಕರ!

❑ ಸ್ನೇಹಜೀವಿ ನ್ಯೂಸ್

**ಮೈಸೂರಿನ ಸಾಲಿಗ್ರಾಮನ ಭೇರ್ಯ ಗ್ರಾಮದ ಲಾಡ್ಜ್‌ವೊಂದರಲ್ಲಿ 20 ವರ್ಷದ ವಿವಾಹಿತ ಮಹಿಳೆ ಬರ್ಬರವಾಗಿ ಹತ್ಯೆಯಾಗಿದ್ದು ಪ್ರಿಯಕರನೇ ಈ ದುಷ್ಕೃತ್ಯ ಎಸಗಿದ್ದಾನೆ. ಮೃತ ಮಹಿಳೆಯನ್ನು ಗೆರಸನಹಳ್ಳಿ ಗ್ರಾಮದ ರಕ್ಷಿತಾ ಎಂದು ಗುರುತಿಸಲಾಗಿದೆ.**





ಮೈಸೂರು: ಮೈಸೂರಿನ ಸಾಲಿಗ್ರಾಮನ ಭೇರ್ಯ ಗ್ರಾಮದ ಲಾಡ್ಜ್‌ವೊಂದರಲ್ಲಿ 20 ವರ್ಷದ ವಿವಾಹಿತ ಮಹಿಳೆ ಬರ್ಬರವಾಗಿ ಹತ್ಯೆಯಾಗಿದ್ದು ಪ್ರಿಯಕರನೇ ಈ ದುಷ್ಕೃತ್ಯ ಎಸಗಿದ್ದಾನೆ. ಮೃತ ಮಹಿಳೆಯನ್ನು ಗೆರಸನಹಳ್ಳಿ ಗ್ರಾಮದ ರಕ್ಷಿತಾ ಎಂದು ಗುರುತಿಸಲಾಗಿದೆ. ಪ್ರಿಯಕರ ಸಿದ್ದರಾಜು ಎಂಬಾತ ರಕ್ಷಿತಾ ಬಾಯಿಗೆ ಜಿಲೆಟಿನ್ ಕಡ್ಡಿ ಇಟ್ಟು ಸ್ಫೋಟಿಸಿ ಕೊಂದಿರುವುದಾಗಿ ತಿಳಿದುಬಂದಿದೆ. ಪ್ರಕರಣ ಸಂಬಂಧ ಸಾಲಿಗ್ರಾಮದ ಪೊಲೀಸರು ಸಿದ್ದರಾಜುನನ್ನು ಬಂಧಿಸಿದ್ದಾರೆ.

ಕೇರಳ ಮೂಲದ ಯುವಕನನ್ನು ರಕ್ಷಿತಾ ಮದುವೆಯಾಗಿದ್ದರೂ ಸಿದ್ದರಾಜು ಜೊತೆ ಅನೈತಿಕ ಸಂಬಂಧ ಹೊಂದಿದ್ದರು ಎನ್ನಲಾಗಿದೆ. ಕಪ್ಪಡಿ ಕ್ಷೇತ್ರಕ್ಕೆ ಹೋಗೋಣ ಅಂತ ಸಿದ್ದರಾಜು ರಕ್ಷಿತಾಳನ್ನು ಕರೆಸಿಕೊಂಡಿದ್ದಾನೆ. ನಂತರ ಲಾಡ್ಜ್ ಗೆ ಕರೆದುಕೊಂಡು ಹೋಗಿ ಸಿದ್ದರಾಜು ಬಾಯಿಗೆ ಜಿಲೆಟಿನ್ ಕಡ್ಡಿ ಇಟ್ಟು ಸ್ಫೋಟಿಸಿ ಕೊಲೆ ಮಾಡಿ ನಂತರ ಸಿದ್ದರಾಜು ಮೊದಲು ಮೊಬೈಲ್ ಬ್ಲಾಸ್ಟ್ ಕಥೆ ಕಟ್ಟಿದ್ದನು. ಆದರೆ ತನಿಖೆಯ ನಂತರ ಅಸಲಿ ಸಂಗತಿ ಬಯಲಿಗೆ ಬಂದಿದೆ.

Snehajeevi Kannada Daily, Printed and Published and owned by ABDULHAMEED SHALAGAR House No. 6421 Rajput Oni, Betageri-Gadag, State : Karnataka
Editor : ABDULHAMEED SHALAGAR, Printed at : Prabhu Graphics, 3094A, Station Road Gadag, District Gadag 582 101 State : Karnataka